# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –258 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:07–05–2025 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 258 | RNI No: KARKAN/2023/88462 | KA/SK/CTA-874/2024-2026 | Chitradurga | Date: 07-05-2025 Wednesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಎಸ್ಸೆಸ್ಸೆಲ್ಸಿ: 4ನೇ ಬಾರಿಗೆ 100% ಫಲಿತಾಂಶ ದಾಖಲಿಸಿದ ಇಂದಿರಾಗಾಂಧಿ ವಸತಿ ಶಾಲೆ 2

ಜ್ಯೋತಿಷಿ ರಾಘವೇಂದ್ರ ನಾಯಕರಿಗೆ ಜ್ಯೋತಿಷ್ಯ ಚಕ್ರವರ್ತಿ ಬಿರುದು 3

ಕಾಣೆಯಾಗುವ ಬಾಲ್ಯದ ಆದರ್ಶಗಳು...... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಬಾಕ್ಸಿಂಗನಲ್ಲಿ ಬಂಗಾರದ ಪದಕ ಪಡೆದ ಚಿತ್ರದುರ್ಗದ ಯುವತಿ




» **ಚಿತ್ರದುರ್ಗ**

ತಾಲ್ಲೂಕಿನ ಉಪ್ಪನಾಯಕನಹಳ್ಳಿ ಗ್ರಾಮದ ಯುವತಿ ಶೋಭಾ.ಟಿ ಅವರು ಮಂಗಳೂರಿನಲ್ಲಿ ನಡೆದ 24ನೇ ಕರ್ನಾಟಕ ರಾಜ್ಯ ವುಶು ಚಾಂಪಿಯನ್ ಶೀಪ್‌ನಲ್ಲಿ ಭಾಗವಹಿಸಿ ಬಂಗಾರದ ಪದಕವನ್ನು ಗೆದ್ದು ಚಿತ್ರದುರ್ಗ ಜಿಲ್ಲೆಗೆ ಗೌರವ ತಂದಿದ್ದಾರೆ. 65 ಕೆಜಿ ವಿಭಾಗದ ಬಾಕ್ಸಿಂಗ್ ನಲ್ಲಿ ಕುಮಾರಿ ಶೋಭಾ.ಟಿ ಅವರು ಭಾಗವಹಿಸಿ ಎದುರಾಳಿಗಳನ್ನು ಸೋಲಿಸಿ ಬಂಗಾರದಪದಕವನ್ನುಮೂಡಿಗೆರೆಸಿಕೊಂಡಿದ್ದಾರೆ. ಚಿತ್ರದುರ್ಗ ಜಿಲ್ಲೆಯ ರಾಜಕೀಯ ವ್ಯಕ್ತಿಗಳು ಹಾಗೂ ಉನ್ನತ ಮಟ್ಟದ ಅಧಿಕಾರಿಗಳು ಕ್ರೀಡಾಪಟುವಿಗೆ ಶುಭ ಹಾರೈಸಿದ್ದಾರೆ.

### ದುರ್ಗಾದೀಪ ನಮಸ್ಕಾರ ಜೂ. 1 ರಂದು

» **ಚಿತ್ರದುರ್ಗ**

ನಗರದ ಚಿಕ್ಕಪೇಟೆಯ ಆನೆಬಾಗಿಲು ಹತ್ತಿರದ ಶ್ರೀ ಗುರುರಾಜೋ ವಿಜಯತೇ ಜಗದ್ಗುರು ಶ್ರೀ ಮನ್ಮಧ್ವಾಚಾರ್ಯ ಮೂಲ ಮಹಾಸಂಸ್ಥಾನ ನಂಜನಗೂಡು ಶ್ರೀರಾಘವೇಂದ್ರಸ್ವಾಮಿಗಳವರ ಮಠದವತಿಯಿಂದ ಆಶ್ಲೇಷ ಬಲಿ ಹೋಮ ಹಾಗೂ 'ದುರ್ಗಾದೀಪ ನಮಸ್ಕಾರ ಜೂ. 1 ರಂದು ಹಮ್ಮಿಕೊಳ್ಳಲಾಗಿದೆ ಎಂದು ಮಠದ ಪ್ರಕಟಣೆ ತಿಳಿಸಿದೆ. ಜೂ. 01ನೇ ಭಾನುವಾರ ಬೆಳಿಗ್ಗೆ 9–30ಕ್ಕೆ ಅಶ್ಲೇಷ ಬಲಿಯ ಹೋಮ ನಡೆಯಲಿದ್ದು, ಇದರಿಂದ ಶ್ರೀ ಮಾತಾಪಿತೃಗಳ ನಿಂದನೆ, ಮಾನಸಿಕ ತೊಳಲಾಟ, ಕ್ಷಯರೋಗ, ಕುಷ್ಠರೋಗ, ತುರಿಕೆರೋಗ, ಚರ್ಮರೋಗ, ಸಮಸ್ತ ಅಂಗವಿಕಲತೆ, ಕಿವಿ ಸೋರುವುದು, ಸರ್ಪ ಹಿಂಸೆ, ಸರ್ಪವಧ, ಅಪಘಾತದಿಂದ ಆಗಿರುವ ಮತ್ತು ತಿಳಿದು ತಿಳಿಯದೇ ಮಾಡಿದ ಸರ್ಪಹತ್ಯೆ, ಗುರುಶಾಪ, ಗುರುವಿನಿಂದ ಪೂರ್ವಜನ್ಮದ ಹಾಗೂ ಈ ಜನ್ಮದಲ್ಲಿ ಆಗಿರುವ ಇನ್ನೂ ಹಲವಾರು ದೋಷಗಳು ಕಳೆದು ಮತ್ತು ನಾರಾಯಣ ಬಲಿಯ ದೋಷ ನಿವಾರಣೆಯಾಗುವುದು ಭಕ್ತಾಧಿಗಳು ಸೇವೆಯಲ್ಲಿಪಾಲ್ಗೊಂಡುಶ್ರೀಗುರುರಾಜಅಂತರ್ಗತ ಶ್ರೀ ಆಶ್ಲೇಷ ಬಲಿರಾಜ ಅಭಿಮಾನಿಯಾದ ಶೇಷದೇವರ ಅಂತರ್ಗತನಾದ ಶ್ರೀಜಯಾಪತಿ ಸಂಕರ್ಷಣಾಭಿನ್ನ ಶ್ರೀ ಲಕ್ಷ್ಮೀನರಸಿಂಹ ದೇವರ ಸಂಪೂರ್ಣ ಅನುಗ್ರಹ ಫಲ ಪ್ರಾಪ್ತಿಯಾಗುವುದು. ಜೂ. 01 ನೇ ಭಾನುವಾರ ಸಂಜೆ 6–00ಕ್ಕೆ 'ದುರ್ಗಾದೀಪ ನಮಸ್ಕಾರ ಕಾರ್ಯಕ್ರಮ ನಡೆಯಲಿದ್ದು, ಇದನ್ನು ಮಾಡುವುದರಿಂದ ವಿವಾಹ ವಿಳಂಬದೋಷ, ವಿದ್ಯಾ, ಆತ್ಮಸ್ಥೈರ್ಯ, ರಾಜವಶ, ಯಶ, ಶತೃಭಾಧೆ ನಿವೃತ್ತಿ, ಸಕಲದೋಷ ಪರಿಹಾರ, ದೃಷ್ಟಿದೋಷ ಪರಿಹಾರ, ಲಕ್ಷ್ಮೀಪ್ರಾಪ್ತಿ, ನವಗ್ರಹ ದೋಷ ಪರಿಹಾರ, ಪ್ರಯೋಗ ಅಭಿಚಾರ ದೋಷ ನಿವಾರಣೆಯಾಗುವುದು. ಕಾರಣ ಭಕ್ತಾದಿಗಳು ಸೇವೆಯಲ್ಲಿ ಪಾಲ್ಗೊಂಡು ಶ್ರೀ ಗುರುರಾಜರ ಅಂತರ್ಗತ ಮಹಾಲಕ್ಷ್ಮೀ, ಮಹಾಕಾಳಿ, ಮಹಾಸರಸ್ವತಿ ದೇವಿಯರ ಹಾಗೂ ಲಕ್ಷ್ಮೀನರಸಿಂಹದೇವರ ಸಂಪೂರ್ಣ ಅನುಗ್ರಹ ಫಲ ಪ್ರಾಪ್ತಿಯಾಗುವುದು ಎಂದು ತಿಳಿಸಿದೆ. ಆಶ್ಲೇಷ ಬಲಿ ಸಾಮೂಹಿಕ ಹೋಮ ಹಾಗೂ ದುರ್ಗಾದೀಪ ನಮಸ್ಕಾರ ಸಾಮೂಹಿಕ ಸೇವಾ ದರ ತಲಾ –200 ರೂ.ಗಳನ್ನು ನಿಗಧಿ ಮಾಡಿದೆ. ಹೆಚ್ಚಿನ ಮಾಹಿತಿಗಾಗಿ ಶಾಖಾ ವ್ಯವಸ್ಥಾಪಕರ ದೂರವಾಣಿ ಸಂಖ್ಯೆ 08194–224141 : 9483833601 ಸಂಪರ್ಕ ಮಾಡಬಹುದಾಗಿದೆ.

# ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ: ಡಿಸಿಗಳಿಗೆ ಸಿಎಂ ಸೂಚನೆ

» **ಚಿತ್ರದುರ್ಗ**

ರಾಜ್ಯದಲ್ಲಿ ಎಲ್ಲಿಯೂ ಕುಡಿಯುವ ನೀರಿಗೆ ಯಾವುದೇ ಕಾರಣಕ್ಕೂ ತೊಂದರೆಯಾಗಬಾರದು ಎಂದು ಜಿಲ್ಲಾಧಿಕಾರಿಗಳಿಗೆ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟ ಸೂಚನೆ ನೀಡಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ನಡೆಸಿದ ವಿಡಿಯೋ ಸಂವಾದದಲ್ಲಿ ಅವರು ಮಾತನಾಡಿದರು.

ಶುದ್ಧ ಕುಡಿಯುವ ನೀರಿಗೆ ರಾಜ್ಯದ ಒಂದೇ ಒಂದು ಗ್ರಾಮದಲ್ಲೂ ಸಮಸ್ಯೆ ಆಗಬಾರದು. ಕುಡಿಯುವ ನೀರಿನ ನಿರ್ವಹಣೆಗೆ ಯಾವುದೇ ಹಣಕಾಸಿನ ಕೊರತೆ ಇರುವುದಿಲ್ಲ. ಪಂಚಾಯತ್ ರಾಜ್ ಇಲಾಖೆಗೆ ರೂ.60 ಕೋಟಿ ಈಗಾಗಲೇ ಬಿಡುಗಡೆ ಮಾಡಲಾಗಿದೆ. ಜಿಲ್ಲೆಗಳಲ್ಲಿ ತುರ್ತು ಕುಡಿಯುವ ನೀರಿನ ಪೂರೈಕೆಗೆ ಜಿಲ್ಲಾಧಿಕಾರಿಗಳು ಕ್ರಿಯಾ ಯೋಜನೆ ರೂಪಿಸಿ, ಟಾಸ್ಕ್‌ಫೋರ್ಸ್ ಸಮಿತಿಯಿಂದ ಅನುಮೋದನೆ ಪಡೆದುಕೊಂಡು ಅನುಷ್ಠಾನಗೊಳಿಸಲು ಮುಖ್ಯಮಂತ್ರಿಗಳು ಸೂಚನೆನೀಡಿದರು. ಪ್ರತಿ ವರ್ಷ ಕುಡಿಯುವ






ನೀರಿನ ತೊಂದರೆ ಎದುರಿಸುತ್ತಿರುವ ಗ್ರಾಮಗಳಲ್ಲಿ ಸಮಸ್ಯೆಯನ್ನು ಶಾಶ್ವತವಾಗಿ ನೀಗಿಸಲು ಯೋಜನೆ ರೂಪಿಸಬೇಕು. ಅಗತ್ಯಬಿದ್ದರೆ ಮಾತ್ರ ಬೋರ್‌ವೆಲ್‌ಗಳನ್ನು ಕೊರೆಯಬೇಕು. ಯಾವುದೇ ಕಾರಣಕ್ಕೂ ಅನಗತ್ಯವಾಗಿ ಬೋರ್‌ವೆಲ್ ಕೊರೆದು ವೆಚ್ಚ ಮಾಡಬಾರದು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಾಜ್ಯದಲ್ಲಿ ಕಳೆದ ವರ್ಷಕ್ಕೆ ಹೋಲಿಸಿದರೆ ವಾಡಿಕೆಗಿಂತ ಶೇ.55ರಷ್ಟು ಮಾನ್ಸೂನ್ ಪೂರ್ವ ಹೆಚ್ಚು ಮಳೆಯಾಗಿದೆ. ವಾಡಿಕೆಗಿಂತ ಯಾವುದೇ ಜಿಲ್ಲೆಯಲ್ಲಿ ವಾಡಿಕೆಗಿಂತ ಕಡಿಮೆ ಮಳೆ ದಾಖಲಾಗಿಲ್ಲ. 27 ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ಎಲ್ಲಾ ಜಲಾಶಯಗಳಲ್ಲಿ ಶೇ.50 ರಿಂದ ಶೇ.60ರಷ್ಟು ಹೆಚ್ಚಿನ ನೀರಿನ ಸಂಗ್ರಹವಿದೆ. ಈ ವರ್ಷ ವಾಡಿಕೆಗಿಂತ ಹೆಚ್ಚು ಮುಂಗಾರು ಮಳೆಯಾಗುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಾನ್ಸೂನ್ ವಿಳಂಬವಾದರೆ 6319 ಹಳ್ಳಿಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗಬಹುದು ಎಂದು ಗುರುತಿಸಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ 551 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, 123 ಗ್ರಾಮಗಳಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಅಗತ್ಯ ಸಂದರ್ಭದಲ್ಲಿ ನೀರು ಪಡೆಯಲು ಈಗಾಗಲೇ 3 ಸಾವಿರ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಲಾಗಿದ್ದು, 480 ಬೋರ್‌ವೆಲ್‌ಗಳನ್ನು ಖಾಸಗಿಯವರಿಂದ ಬಾಡಿಗೆ ಪಡೆದು ನೀರು ಒದಗಿಸಲಾಗುತ್ತಿದೆ ಎಂದು ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಸಮಸ್ಯೆ ಶುರುವಾಗುವ ಮೊದಲೇ ಸಭೆ ನಡೆಸಿ ಸಮರೋಪಾದಿ ಸಿದ್ಧತೆ ಕೈಗೊಳ್ಳುವಂತೆ ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದರು. ಕಂದಾಯ ಸಚಿವ ಕೃಷ್ಣಬೈರೇಗೌಡ ಮಾತನಾಡಿ, ಬಿ–ಖಾತಾ, ಇ–ಖಾತಾವನ್ನು ಅಧಿಕಾರಿಗಳು ಸಮರ್ಪಕವಾಗಿ ಮಾಡಬೇಕು. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಪ್ರತಿ ದಿನವೂ ಒಂದು ಸ್ಥಳೀಯ ಸಂಸ್ಥೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಬೇಕು ಎಂದು ತಿಳಿಸಿದರು. ಸಚಿವರಾದ ಪ್ರಿಯಾಂಕ್ ಖರ್ಗೆ, ಎಂ.ಬಿ.ಪಾಟೀಲ್, ದಿನೇಶ್ ಗುಂಡೂರಾವ್, ಕೃಷ್ಣಬೈರೇಗೌಡ, ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೇರಿದಂತೆ ಹಿರಿಯ ಅಧಿಕಾರಿಗಳು ವಿಡಿಯೋ ಸಂವಾದದಲ್ಲಿ ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಭಾಗಿಯಾಗಿದ್ದರು. ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸನಗೌಡ ಪಾಟೀಲ್, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

### ಹೊಸದುರ್ಗ: ಕುರಿಗಳ ಮೈ ತೋಳೆಯಲು ಹೋಗಿದ್ದ ದಂಪತಿಗಳು ನೀರು ಪಾಲು

## ಪತ್ನಿ ಮೃತ ದೇಹ ಪತ್ತೆ, ಪತ್ತೆಯಾಗದ ಪತಿ ಮೃತ ದೇಹ

**ಹೊಸದುರ್ಗ:** ಕುರಿಗಳ ಮೈ ತೊಳೆಯಲು ಹೋಗಿದ್ದ ಗಂಡ ಮತ್ತು ಹೆಂಡತಿ ನೀರುಪಾಲಾಗಿರುವ ಘಟನೆ ತಾಲೂಕಿನ ಮಾಡದಕೆರೆ ಹೋಬಳಿ ಅತ್ತಿಮಗ್ಗೆ ಮೇಗಳಹಟ್ಟಿ ಗ್ರಾಮದ ಸಮೀಪವಿರುವ ಖಾನಿ ಹಳ್ಳದಲ್ಲಿ ಮಂಗಳವಾರ ಸಂಜೆ ನಡೆದಿದೆ. ನೀರು ಪಾಲಾದ ದಂಪತಿಗಳನ್ನು ಅತ್ತಿಮಗ್ಗೆ ಮೇಗಳಹಟ್ಟಿ ಗ್ರಾಮದ ಕುರಿಗಾಯಿ ತಿಮ್ಮಣ್ಣ (35) ಹಾಗೂ ಈತನ ಪತ್ನಿ ಪುಟ್ಟಮ್ಮ (30) ಎಂದು ತಿಳಿದು ಬಂದಿದ್ದು ತಿಮ್ಮಣ್ಣ ಮತ್ತು ಪುಟ್ಟಮ್ಮ ಇಬ್ಬರೂ ಕೂಡ ಎಂದಿನಂತೆ ಮಂಗಳವಾರ ಬೆಳಿಗ್ಗೆ ಸುಮಾರು 10 ಗಂಟೆಯ ಸಮಯಕ್ಕೆ ತಮ್ಮದೆ ಆದ ಕುರಿಗಳನ್ನು ಮೇಯಿಸುವ ಸಲುವಾಗಿ ಹೋರಗಡೆ ಹೋಗಿದ್ದಾರೆ ಸಂಜೆ ವಾಪಸ್ ಬರುವಾಗ ಕುರಿಗಳ ಮೈ ತೊಳೆಯುವ ಸಲುವಾಗಿ ಮದ್ಯಾಹ್ನ 2.30 ಗಂಟೆಯ ಸಮಯಕ್ಕೆ ಗ್ರಾಮದ ಸಮೀಪವಿರುವ ಖಾನಿಹಳ್ಳ (ವಾಣಿವಿಲಾಸ ಸಾಗರದ ಹಿನ್ನೀರು ಪ್ರದೇಶ) ದಲ್ಲಿ ಕುರಿಗಳನ್ನ ತೊಳೆಯುತ್ತಿದ್ದ ಸಂಧರ್ಬದಲ್ಲಿ ತಿಮ್ಮಣ್ಣ ಕಾಳು ಜಾರಿ ನೀರಿನಲ್ಲಿ ಮುಳುಗಿದ್ದಾನೆ ಇದನ್ನ ನೋಡಿದ ಹೆಂಡತಿ ಪುಟ್ಟಮ್ಮ ಗಂಡ ತಿಮ್ಮಣ್ಣನನ್ನು ಎಳೆದುಕೊಳ್ಳಲು ಹೋದಾಗ ಈಕೆಯೂ ಕೂಡ ಕಾಲು ಜಾರಿ ಬಿದ್ದು ಇಬ್ಬರೂ ಸಹಾ ನೀರು ಪಾಲಾಗಿದ್ದಾರೆ.

ಪುಟ 2

> ಘಟನೆ ನಡೆದ ಸ್ಥಳದಲ್ಲಿ ಕತ್ತಲಾಗಿದ್ದರೂ ಸಹಾ ವಿದ್ಯುತ್ ವ್ಯವಸ್ಥೆ ಮಾಡಿಕೊಂಡು ತಿಮ್ಮಣ್ಣನ ಶವದ ಹುಡುಕಾಟ ನಡಯುತ್ತಿದೆ.ಪೋಲಿಸ್ ಇಲಾಖೆ ಮತ್ತು ಅಗ್ನಿ ಶಾಮಕ ಸಿಬ್ಬಂಧಿ ಜಂಟಿಯಾಗಿ ಕಾರ್ಯಚರಣೆ ನಡೆಸುತ್ತಿದ್ದ ಕ್ಯಾಮರಾವನ್ನ ಸಹಾ ಬಿಟ್ಟು ನೋಡಲಾಗುತ್ತಿದ್ದೆ ವಿಪರೀತ ಕೆಸರು ಇರುವ ಕಾರಣ ಕ್ಯಾಮರದಲ್ಲಿ ಸ್ಪಷ್ಟವಾಗಿ ಕಾಣುತ್ತಿಲ್ಲ ಮಾಡುವ ಪ್ರಯತ್ನ ಮಾಡಲಾಗುತ್ತಿದೆ ಕ್ಯಾಮಾರದಲ್ಲಿ ಸ್ಪಷ್ಟವಾಗಿ ಕಂಡರೆ ಪ್ರಯತ್ನ ಪಟ್ಟು ರಾತ್ರಿಯೇ ಶವವನ್ನ ಹೊರತೆಗೆಯಲಾಗುವುದು ತೀರಾ ಕಷ್ಟವೆನಿಸಿದರೆ ಬುಧವಾರ ಮುಂಜಾನೆ ಕಾರ್ಯಚರಣೆ ನಡೆಸಿ ಹೊರ ತೆಗೆಯಲಾವುದು ಪೋಲಿಸ್ ಸಿಬ್ಬಂಧಿ ಇಲ್ಲಿಯೇ ಬೀಡು ಬಿಟ್ಟಿದೆ.
>
> » **ರಮೇಶ್ ಸಿ.ಪಿ.ಐ ಹೊಸದುರ್ಗ ಪೋಲಿಸ್ ಠಾಣೆ**

## ೮ನೇ ತರಗತಿಗೆ ಹೋಗಬೇಕಿದ್ದ ವಿದ್ಯಾರ್ಥಿ ಗೋಕಟ್ಟೆಯಲ್ಲಿ ಸಾವು

**ಹೊಸದುರ್ಗ:** ಗೋಕಟ್ಟೆಯಲ್ಲಿ ಮುಳುಗಿ ವಿದ್ಯಾರ್ಥಿಯೋರ್ವ ಸಾವನ್ನಪ್ಪಿರುವ ಘಟನೆ ತಾಲೂಕಿನ ಬಾಗೂರು ಸಮೀಪ ಮಂಟೇನಹಳ್ಳಿ ಗ್ರಾಮದ ಹೊರ ವಲಯದಲ್ಲಿ ಸಂಭವಿಸಿದೆ. ಮೃತನನ್ನು ಮಂಟೇನಹಳ್ಳಿ ಗ್ರಾಮದ ರೈತ ಶೇಖರಪ್ಪ ಮತ್ತು ಸುಧಾ ಎಂಬುವವರ ಒಬ್ಬನೇ ಮಗ ಮಂಜುನಾಥ್ (13) ಎಂದು ತಿಳಿದು ಬಂದಿದ್ದು ಈತ ಮೇ 5 ರಂದು ಸೋಮವಾರ ಮದ್ಯಾಹ್ನ ಗ್ರಾಮದ ಸಮೀಪವಿರುವ ಜಮೀನೊಂದರಲ್ಲಿದ್ದ ಗೋಕಟ್ಟೆಗೆ ಕುರಿ ಕಾಯುವ ಹುಡುಗರ ಜೊತೆ ಹೋಗಿ ಈಜು ಹಾಡುವ ಸಂಧರ್ಬದಲ್ಲಿ ಈಜಿ ಮೇಲೆ ಬರಲು ಅಗದೆ ಸಾವನ್ನಪ್ಪಿದ್ದಾನೆ, ಮಂಜುನಾಥ್ ಬಾಗೂರಿನ ಪರಪ್ಪ ಶಾಲೆಯಲ್ಲಿ ಏಳನೇ ತರಗತಿ ಪರೀಕ್ಷೆ ಬರೆದು ಉತ್ತೀರ್ಣನಾಗಿ ಎಂಟನೇ ತರಗತಿಗೆ ಹೋಗಬೇಕಿತ್ತು, ಬೇಸಿಗೆ ರಜೆ ಇದ್ದುದರಿಂದ ತನ್ನ ಸಹಪಾಠಿಗಳೊಂದಿಗೆ ಮನೆಯಲ್ಲಿ ಹೇಳದೆ ಗೋಕಟ್ಟೆಯಲ್ಲಿ ಈಜು ಆಡಲು ಹೋಗಿ ನೀರಿನಲ್ಲಿ ಮುಳುಗಿ ಮೇಲೆ ಬರಲು ಸಾಧ್ಯವಾಗದೆ ಸಾವನ್ನಪ್ಪಿದ್ದು ಬಗ್ಗೆ ಹೊಸದುರ್ಗ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪುಟ 2


**ಪ್ರಮುಖ ಸುದ್ದಿ**

# ರಾಷ್ಟ್ರೀಯ ಹೆದ್ದಾರಿಯಲ್ಲಿ ಕಂಬಕ್ಕೆ ಡಿಕ್ಕಿಯಾಗಿ ಪಲ್ಟಿಯಾದ ಬಸ್; ಓರ್ವ ಸಾವು: 30ಕ್ಕೂ ಹೆಚ್ಚು ಜನರಿಗೆ ಗಾಯ

» **ಚಳ್ಳಕೆರೆ**

ಚಳ್ಳಕೆರೆ–ಸಾಣೀಕೆರೆ ರಾಷ್ಟ್ರೀಯ 150(ಎ) ಎಂಆರ್‌ಪಿಎಲ್ ಪೆಟ್ರೋಲ್ ಬಂಕ್ ಬಳಿ ಮಂಗಳವಾರ ಬೆಳಗಿನ ಜಾವ ಯಾದಗಿರಿಯಿಂದ ಬೆಂಗಳೂರಿಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ಸೈನ್‌ಬೋರ್ಡ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿ ಓರ್ವ ವ್ಯಕ್ತಿ ಮೃತಪಟ್ಟು ಬಸ್‌ನಲ್ಲಿದ್ದ ಸುಮಾರು 30ಕ್ಕೂ ಹೆಚ್ಚು ಜನರು ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಗಾಯಗೊಂಡ ಪ್ರಯಾಣಿಕ ಯಾದಗಿರಿ ಜಿಲ್ಲೆಯ ವಡಗೇರಗ್ರಾಮದ ಶಂಭುಲಿಂಗ(19) ಪೊಲೀಸರಿಗೆ ದೂರು ನೀಡಿದ್ದು ಯಾದಗಿರಿಯಿಂದ ಬೆಂಗಳೂರಿಗೆ ಹೋಗುವ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಬಸ್ ಚಾಲಕ ಅಜಾಗರೂಕತೆಯಿಂದ ನಡೆಸಿ ರಸ್ತೆಯ ಪಕ್ಕದ ಗ್ರಾಂಟಿಸೈನ್‌ಬೋರ್ಡ್‌ಗೆ ಡಿಕ್ಕಿ ಪಡಿಸಿ ಪಲ್ಟಿಯಾಗಿದ್ದು ವಡೇಗೇರಗ್ರಾಮದ ಶಿವಪ್ಪ(35) ಎಂಬ ವ್ಯಕ್ತಿ ಸ್ಥಳದಲ್ಲೇ ಮೃತಪಟ್ಟಿರುತ್ತಾನೆ.





ಬಸ್‌ನಲ್ಲಿಪ್ರಯಾಣಿಸುತ್ತಿದ್ದಶಂಭುಲಿಂಗ, ಬಲಭೀಮ, ಅಶ್ವಿನಿ, ಶಾಂತಮ್ಮ, ರಾಧ, ಸ್ವಾತಿ, ಶಿವಮ್ಮ, ಹುಸೇನಮ್ಮ, ಪಾರ್ವತಿ, ಮರಿಲಿಂಗಮ್ಮ, ಗಂಗಮಾಳಮ್ಮ ಸೇರಿದಂತೆ ಸುಮಾರು 30ಕ್ಕೂ ಹೆಚ್ಚು ಜನರು ಗಾಯವಾಗಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಜಿಲ್ಲಾ ರಕ್ಷಣಾಧಿಕಾರಿ ಭೇಟಿ :– ಅಪಘಾತ ಸುದ್ದಿ ತಿಳಿಯುತ್ತಲೇ ಜಿಲ್ಲಾ ರಕ್ಷಣಾಧಿಕಾರಿ ರಂಜಿತ್‌ಕುಮಾರ್‌ಬಂಡಾರು ಕೂಡಲೇ ಸ್ಥಳಕ್ಕೆ ಆಗಮಿಸಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದಾರೆ. ಅಪಘಾತದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರಲ್ಲದೆ, ಗಾಯಗೊಂಡ ಬಸ್ ಚಾಲಕ ಶಿವಶರಣ ಸೇರಿದಂತೆ ಆಸ್ಪತ್ರೆಗೆ ದಾಖಲಾದ ಗಾಯಾಳುಗಳ ವಿಚಾರಣೆ ನಡೆಸಿದರು. ಘಟನೆ ನಡೆದ ಸ್ಥಳಕ್ಕೆ ಡಿವೈಎಸ್ಪಿ ರಾಜಣ್ಣ, ಠಾಣಾ ವೃತ್ತ ನಿರೀಕ್ಷಕ ರಾಜಫಕ್ರುದ್ದೀನ್‌ದೇಸಾಯಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

## ಫಾಸ್ಟ್ ನ್ಯೂಸ್

### ಪತ್ನಿ ಮೃತ ದೇಹ ಪತ್ತೆ, ಪತ್ತೆಯಾಗದ ಪತಿ ಮೃತ ದೇಹ

» ಮೊದಲ ಪುಟದಿಂದ

ವಿಷಯ ತಿಳಿದ ಕೂಡಲೆ ಗ್ರಾಮಸ್ಥರು,ರಕ್ಷಣಾ ಇಲಾಖೆಯವರು ಹಾಗೂ ಅಗ್ನಿ ಶಾಮಕ ದಳದ ಸಿಬ್ಬಂಧಿಯವರು ಸ್ಥಳಕ್ಕೆ ಧಾವಿಸುವ ಹೊತ್ತಿಗೆ ಮಬ್ಬು ಗತ್ತಲಾಯಿತು ಆದರೂ ಪಟ್ಟಮ್ಮನ ಶವವನ್ನು ಪತ್ತೆ ಮಾಡಿ ಹೊರತೆಗೆಯಲಾಯಿತು.ಪೂರ್ತಿ ಕತ್ತಲಾಗಿದ್ದರಿಂದ ತಿಮ್ಮಣ್ಣನ ಶವವನ್ನ ಹುಡುಕಿ ಹೊರ ತೆಗೆಯಲು ಸಾಧ್ಯವಾಗಲಿಲ್ಲ. ಮಕ್ಕಳು ಅನಾಥ: ಮೃತ ತಿಮ್ಮಣ್ಣ ಹಾಗೂ ಪುಟ್ಟಮ್ಮ ದಂಪತಿಗೆ ಇಬ್ಬರು ಹೆಣ್ಣುಮಕ್ಕಳಿದ್ದಾರೆ.ಒಬ್ಬ ಮಗಳು ಐದನೇ ತರಗತಿ ಮತ್ತೊಬ್ಬಳು ಎರಡನೇ ತರಗತಿ ಓದುತ್ತಿದ್ದು ತಂದೆ ಮತ್ತು ತಾಯಿಯ ಮರಣದಿಂದ ಮಕ್ಕಳು ಕಂಗಾಲಾಗಿ ಅನಾಥರಾಗಿದ್ದಾರೆ ಹಳ್ಳದ ಸಮೀಪ ಮೃತರ ಮಕ್ಕಳು ಸಂಬಂಧಿಕರು ಮತ್ತು ಗ್ರಾಮಸ್ಥರ ಗೋಳು ಹೇಳತೀರದು.ತಿಮ್ಮಣ್ಣನ ಮೃತ ದೇಹವನ್ನ ಬೇಗ ಪತ್ತೆ ಮಾಡಿ ಹೊರಗೆಯುವಂತೆ ರಾತ್ರಿ ಕತ್ತಲಾದರೂ ಸಹಾ ಸಂಬಂಧಿಕರು ಪಟ್ಟು ಹಿಡಿದು ಹಳ್ಳದ ಬದಿಯಲ್ಲೆ ಕುಳಿತು ಗೋಳಾಡುತ್ತಿದ್ದಾರೆ.

### 8ನೇ ತರಗತಿಗೆ ಹೋಗಬೇಕಿದ್ದ ವಿದ್ಯಾರ್ಥಿ ಗೋಕಟ್ಟೆಯಲ್ಲಿ ಸಾವು

» ಮೊದಲ ಪುಟದಿಂದ

ನೀರಿನಲ್ಲಿ ಹೋಮ ಮಾಡಿದಂತಾಯಿತು: ಶೇಖರಪ್ಪ ದಂಪತಿಗೆ ಬಹಳ ವರ್ಷಗಳ ನಂತರ ಗಂಡುಮಗು ಜನಿಸಿದ್ದ, ಆತನಿಗೆ ಮಂಜುನಾಥ್ ಎಂದು ನಾಮಕರಣ ಮಾಡಿದ್ದರು, ಗಂಡು ಮಗು ಆಗಿ ನಾಮಕರಣ ಮಾಡಿದ ನಂತರ ಶೇಖರಪ್ಪ ಪ್ರತಿ ವರ್ಷ ಧರ್ಮಸ್ಥಳಕ್ಕೆ ಮತ್ತು ನಾಯಕನಹಟ್ಟಿಗೆ ಒಂದು ಬೀಡಿನ ತೆಂಗಿನ ಕಾಯಿಯನ್ನ ಪ್ರತಿ ವರ್ಷ ಭಕ್ತಿಪೂರ್ವವಾಗಿ ಅರ್ಪಿಸಿ ಪೂಜೆ ಮಾಡಿಸಿಕೋಂಡುಬರುತ್ತಿದ್ದರು,ಆದರೆ ವಿಧಿಯಾಟ ಮಂಜುನಾಥ ಕೊನೆಗೆ ಕೊನೆಯುಸಿರೆಳೆದಿದ್ದಾನೆ, ಶೇಖರಪ್ಪ ದಂಪತಿ ಮಾಡುತ್ತಿದ್ದ ಕಾಯಕ ನಿಷ್ಟೆ, ದೇವರಲ್ಲಿದ್ದ ಅಪಾರ ಭಕ್ತಿ ನೀರಿನಲ್ಲಿ ಹೋಮ ಮಾಡಿದಂತಾಯಿತು ಎಂದು ಅವರ ಕುಂಟಂಬದ ಸದಸ್ಯರು ರೋಧಿಸುತ್ತಿದ್ದ ದೃಶ್ಯ ಕರುಳು ಹಿಂಡಿ ಮನ ಕಲಕುವಂತಿತ್ತು.

### ಇಂದು ಎಸ್‌ಕೆಪಿ ದೇವಸ್ಥಾನದಲ್ಲಿ ವಾಸವಿ ಜಯಂತಿ

» ದಾವಣಗೆರೆ

ನಗರದ ಎಸ್‌ಕೆಪಿ ರಸ್ತೆಯಲ್ಲಿರುವ ಶ್ರೀಕನ್ನಿಕಾ ಪರಮೇಶ್ವರಿ ದೇವಸ್ಥಾನ (ರಿ.) ಪಬ್ಲಿಕ್ ರಿಲಿಜಿಯಸ್ ಟ್ರಸ್ಟ್ ವತಿಯಿಂದ ಶ್ರೀ ಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿ ಮೇ 7ರಂದು ವಾಸವಿ ಜಯಂತಿ ಅಂಗವಾಗಿ ಬೆಳಿಗ್ಗೆ 6ಗಂಟೆಗೆ ವಾಸವಿ ಸುಪ್ರಭಾತ, ಬೆಳಿಗ್ಗೆ 8ಕ್ಕೆ ಶ್ರೀ ಕನ್ನಿಕಾ ಪರಮೇಶ್ವರಿ ದೇವಿ ಮೂರ್ತಿಗೆ ಸೇವಾಕರ್ತರಿಂದ ಕ್ಷೀರಾಭಿಷೇಕ, ಬೆಳಿಗ್ಗೆ 11.30ಕ್ಕೆ ಸೇವಾಕರ್ತ ದಂಪತಿಗಳಿಂದ ಅಮ್ಮನವರ ತೊಟ್ಟಿಲು ಸೇವೆ ನಡೆಯಲಿದೆ. ಮಧ್ಯಾಹ್ನ 12.30ಕ್ಕೆ ಮಹಾ ಮಂಗಳಾರತಿಯ ನಂತರ ಭೋಜನದ ವ್ಯವಸ್ಥೆ, ಸಂಜೆ 6 ಗಂಟೆಯಿಂದ ಶ್ರೀ ಕನ್ನಿಕಾ ಪರಮೇಶ್ವರಿ ಅಮ್ಮನವರ ಉತ್ಸವ, ಉತ್ಸವದ ನಂತರ ಪ್ರಸಾದ ವಿನಿಯೋಗ ಇರುತ್ತದೆ. ಸರ್ವಜನಾಂಗದ ಭಕ್ತರು ಈ ಉತ್ಸವದಲ್ಲಿ ಪಾಲ್ಗೊಂಡು ಶ್ರೀ ಕನ್ನಿಕಾ ಪರಮೇಶ್ವರಿ ಅಮ್ಮನವರ ಕೃಪೆಗೆ ಪಾತ್ರರಾಗಬೇಕೆಂದು ಶ್ರೀಕನ್ನಿಕಾ ಪರಮೇಶ್ವರಿ ದೇವಸ್ಥಾನ (ರಿ.) ಪಬ್ಲಿಕ್ ರಿಲಿಜಿಯಸ್ ಟ್ರಸ್ಟ್ ಅಧ್ಯಕ್ಷ ಸಿ.ಪಿ.ಸತೀಶ್ ಕುಮಾರ್ ಕೋರಿದ್ದಾರೆ.

### ಜನರಲ್ ಕಾರಿಯಪ್ಪ ಶಾಲೆಗೆ ಉತ್ತಮ ಫಲಿತಾಂಶ

» ಹೊಸದುರ್ಗ

ಪಟ್ಟಣದ ಜನರಲ್ ಕಾರಿಯಪ್ಪ ಶಾಲೆಗೆ ಈ ಬಾರಿಯ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಬಂದಿದ್ದು ಅತ್ಯುನ್ನತ ಶ್ರೇಣಿಯಲ್ಲಿ 5,ಪ್ರಥಮ ಶ್ರೇಣಿಯಲ್ಲಿ 20 ಹಾಗೂ ದ್ವಿತೀಯ ಶ್ರೇಣಿಯಲ್ಲಿ 4 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.ನಮ್ರತಾ ಟಿ.ಎಸ್.616 ಅಂಕಗಳನ್ನು ಗಳಿಸಿ ಪ್ರಥಮ ಸ್ಥಾನ ಪಡೆದಿದ್ದಾಳೆ. ವಿದ್ಯಾರ್ಥಿಗಳನ್ನು ಶಾಲೆಯ ಅಧ್ಯಕ್ಷ ಹಂಜಿ ಶಿವಸ್ವಾಮಿ ಉಪಾಧ್ಯಕ್ಷ ಡಿ.ಆದಿರಾಜಯ್ಯ ಹಾಗೂ ಆಡಳಿತ ಮಂಡಳಿ ಸದಸ್ಯರು ಅಭಿನಂದಿಸಿದ್ದಾರೆ.

### ಅರ್ಹರಿಂದ ಅರ್ಜಿ ಆಹ್ವಾನ

» ಹೊಸದುರ್ಗ

ಕಲ್ಯಾಣ ಕರ್ನಾಟಕ ವೇದಿಕೆಯಿಂದ ಜೂನ್ ಕೊನೆಯ ವಾರದಲ್ಲಿ ನಡೆಯಲಿರುವ ಕಲ್ಯಾಣ ಕರ್ನಾಟಕ ಕಲಾರತ್ನ ರಾಜ್ಯ ಪ್ರಶಸ್ತಿಗೆ ಆರ್ಹ ಪ್ರತಿಭಾವಂತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ವೇದಿಕೆಯ ಜಿಲ್ಲಾಧ್ಯಕ್ಷ ಚಂದ್ರು ಕಲಾವಿದ ತಿಳಿಸಿದ್ದಾರೆ. ಜಾನಪದ, ಸೋಬಾನೆ, ಭಜನೆ, ಕಥನಗೀತೆಗಳು, ಕೋಲಾಟ, ವೀರಗಾಸೆ, ಡೊಳ್ಳು, ತಮಟೆ, ಚಿತ್ರಕಲೆ, ಸಂಗೀತ, ವೀರಯೋಧರು, ಸಾಹಿತ್ಯ, ರಂಗಭೂಮಿ, ಭರತನಾಟ್ಯ ಶಿಕ್ಷಣ ಇತ್ಯಾದಿ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಕಲಾವಿದರು ಈ ಪ್ರಶಸ್ತಿ ಪಡೆಯಲು ಆರ್ಹರಾಗಿದ್ದು ಅರ್ಜಿ ಸಲ್ಲಿಸಲು ಜೂನ್ 10 ರಂದು ಕಡೆಯ ದಿನವಾಗಿದ್ದು ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ದೂ:9902851319 ಸಂಪರ್ಕಿಸಬಹುದು

# ಎಸ್ಸೆಸ್ಸೆಲ್ಸಿ: 4ನೇ ಬಾರಿಗೆ 100% ಫಲಿತಾಂಶ ದಾಖಲಿಸಿದ ಬಾಲೇನಹಳ್ಳಿ ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆ

» ಚಳ್ಳಕೆರೆ

ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲ್ಲೂಕಿನ ಬಾಲೇನಹಳ್ಳಿಯ ಶ್ರೀಮತಿಇಂದಿರಾಗಾಂಧಿ ವಸತಿ ಶಾಲೆ ಶೇ.100 ಫಲಿತಾಂಶ ದಾಖಲಿಸಿದ್ದಲ್ಲದೆ, ಸರ್ಕಾರಿ ಶಾಲೆಗಳಲ್ಲಿ ತಾಲ್ಲೂಕಿನಲ್ಲಿ ಮೊದಲ ಸ್ಥಾನ ಪಡೆಯುವಲ್ಲಿ ಸಫಲವಾಗಿದೆ. ಕಳೆದ 2017-18ರಲ್ಲಿ ಆರಂಭವಾದ ಈ ಶಾಲೆ ಈಗಾಗಲೇ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೂರು ಬಾರಿ 100ರ ಫಲಿತಾಂಶ ದಾಖಲಿಸಿದ್ದು ನಾಲ್ಕನೇ ಬಾರಿಗೂ ಶೇ.100ರ ಫಲಿತಾಂಶ ದಾಖಲಿಸುವ ಮೂಲಕ ಶಿಕ್ಷಣ ಇಲಾಖೆಯ ಗೌರವವನ್ನು ಹೆಚ್ಚಿಸಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದ್ದಾರೆ.

ಅವರು ಪತ್ರಿಕೆಗೆ ಮಾಹಿತಿ ನೀಡಿ, ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಉತ್ತಮ ಪಡಿಸಲು ಹಲವಾರು ರೀತಿಯ ಪರಿಶ್ರಮವನ್ನು ವಹಿಸಲಾಗಿತ್ತು. ಆದರೂ ಸಹ ನಿರೀಕ್ಷಿತ ಮಟ್ಟದಲ್ಲಿ ಫಲಿತಾಂಶ ಏರಿಕೆಯಾಗದಿದ್ದರೂ



ಬಾಲೇನಹಳ್ಳಿಯ ಇಂದಿರಾಗಾಂಧಿ ಶಾಲೆ ಶೇ.100ಫಲಿತಾಂಶದಾಖಲಿಸುವಮೂಲಕ ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿರುವ ಶಿಕ್ಷಣದ ಕಾಳಜಿಯನ್ನು ತೋರಿಸಿದೆ. ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಎಚ್.ದಿವಾಕರ್ ಫಲಿತಾಂಶವನ್ನು ಉತ್ತಮ ಪಡಿಸುವ ನಿಟ್ಟಿನಲ್ಲಿ ಶಾಲೆಗೆ ನಿರಂತರ ಭೇಟಿ ನೀಡಿ ಮಾರ್ಗದರ್ಶನ ಮಾಡಿದ್ದು ಶಾಲೆಯ ಎಲ್ಲಾ ಬೋಧಕ ವರ್ಗ ಮಕ್ಕಳಿಗೆ ಶಿಸ್ತು ಮತ್ತು ಸಂಯಮದೊಂದಿಗೆ ಬೋಧನೆ ಮಾಡಿದ್ದು, 100ರ ಫಲಿತಾಂಶ ದಾಖಲಿಸಲು ಕಾರಣವಾಗಿದೆ ಎಂದು ಶಾಲೆಯ ಪ್ರಾಂಶುಪಾಲ ನಾಗರಾಜಗೋಪಾಲಪುರ ತಿಳಿಸಿದ್ದಾರೆ.

ಒಟ್ಟು 49 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಆ ಪೈಕಿ 13 ಅತ್ಯುನ್ನತ್ತ ಶ್ರೇಣಿ, 32 ಪ್ರಥಮ ಶ್ರೇಣಿ, 4 ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಆರ್.ದುರ್ಗಶ್ರೀ-579, ಪಿ.ಮಧು-572, ಎಸ್.ಪೂರ್ಣಿಮಾ-571, ಕೆ.ಎನ್.ಹೇಮಂತ್-569, ಬಿ.ದೀಕ್ಷಿತಾ-567, ಎಂ.ದೇವೀರಮ್ಮ-560, ಆರ್.ಹೇಮಂತ್-558, ಕೆ.ಬೊಮ್ಮಲಿಂಗ-550, ಎಚ್.ಕುಸುಮ-546,ಎ.ಅಭಿಷೇಕ್-545, ಓ.ಬೋರಮ್ಮ-541, ಆರ್.ಅನುಷ-537, ಎಸ್.ಎಂ.ಧಾರಮದಲಿಂಗನಾಯಕ-532 ಪಡೆದು ಅತ್ಯುನ್ನತ ಶ್ರೇಣಿ ಪಡೆದಿರುತ್ತಾರೆ. ಶಾಲೆಯ ಬೋಧಕ ವರ್ಗ ಕೇಶವಮೂರ್ತಿ, ಎನ್.ಎಂ.ಉಷಾ, ಟಿ.ವಿನೋಧಮ್ಮ, ವಸಂತಕುಮಾರಿ, ಬಿ.ನಿಂಗಣ್ಣ, ಸೋಮುಚೌವ್ಹಾಣ, ಆರ್.ಮೇಘನಾ, ರುದ್ರಮುನಿ ಉತ್ತಮ ಬೋಧನೆ ಫಲಿತಾಂಶ ದಾಖಲಿಸಲು ಸಹಕಾರಿಯಾಗಿದೆ ಎಂದು ಪ್ರಾಂಶುಪಾಲರು ತಿಳಿಸಿದ್ದಾರೆ.

# ಹಕ್ಕಿ ಪಿಕ್ಕಿ ಜನಾಂಗದವರಿಗೆ ವಂತಿಕೆ ಹಣದ ಚೆಕ್ ವಿತರಿಸಿದ ಶಾಸಕ ಬಿ.ಜಿ. ಗೋವಿಂದಪ್ಪ

» ಹೊಸದುರ್ಗ

ಪಟ್ಟಣದ ಹೊಸ ತಾಲ್ಲೂಕು ಕಚೇರಿ ಹಿಂಭಾಗದಲ್ಲಿ ವಾಸವಿರುವ ಹಕ್ಕಿ ಪಿಕ್ಕಿ ಅಲೆಮಾರಿ ಜನಾಂಗದ 32 ಕುಟುಂಬದ ವಸತಿ ನಿರ್ಮಾಣಕ್ಕೆ ವಯಕ್ತಿಕ ವಂತಿಗೆ ಹಣವನ್ನು ಸರ್ಕಾರದ ವತಿಯಿಂದ ಬಿಡುಗಡೆ ಮಾಡಿದ್ದು ಶಾಸಕ ಬಿ. ಜಿ. ಗೋವಿಂದಪ್ಪ ಅವರು ತಾಲ್ಲೂಕಿನ ಬಾಗೂರಿನ ಓರಗಲ್ಲಮ್ಮ ದೇವಾಲಯದ ಸಮುದಾಯ ಭವನದಲ್ಲಿ ಭಾನುವಾರ ಚೆಕ್ ವಿತರಿಸಿದರು.

ನಂತರ ಮಾತನಾಡಿದ ಅವರು ಕರ್ನಾಟಕ ಕೊಳಚೆ ನಿರ್ಮೂಲನೆ ಮಂಡಳಿ ವತಿಯಿಂದ ಮನೆಗಳು ಮಂಜೂರಾಗಿದ್ದು ವಸತಿ ನಿರ್ಮಾಣಕ್ಕೆ ವ□ಯಕ್ತಿಕ ವಂತಿಗೆ ಕಟ್ಟಲು ಕಷ್ಟಸಾಧ್ಯವೆಂದು ಹಕ್ಕಿ ಪಿಕ್ಕಿ ಜನಾಂಗದವರು ಮನವಿ ಮಾಡಿದ್ದರು. ಈ ಹಿನ್ನಲೆಯಲ್ಲಿ ಅಂದಿನ ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು ಅವರು ಈ ಬಗ್ಗೆ ಸರ್ಕಾರಕ್ಕೆ ವರದಿ ನೀಡಿದ ಪರಿಣಾಮ ಮುಖ್ಯಮಂತ್ರಿಗಳ ಅಮೃತ್ ನಗರೋತ್ಥಾನ ಯೋಜನೆಯಡಿ 32



ಕುಟುಂಬಗಳಿಗೆ □ 32 ಲಕ್ಷ ನೀಡಲಾಗಿದೆ. ಕಾಂಗ್ರೆಸ್ ಸರ್ಕಾರ ಬಡವರ ಪರ ಕೆಲಸ ಮಾಡುತ್ತಾ, ಅವರ ಅಭಿವೃದ್ಧಿಗೆ ಶ್ರಮಿಸುತ್ತಿದೆ ಎಂದರು.

ಈ ಸಂಧರ್ಬದಲ್ಲಿ ನಗರ ಘಟಕದ ಅಧ್ಯಕ್ಷ ಆಗ್ರೋ ಶಿವಣ್ಣ, ಕುರುಬ ಸಂಘದ ತಾಲ್ಲೂಕು ಅಧ್ಯಕ್ಷ ಮಂಜುನಾಥ್, ಮುಖಂಡರುಗಳಾದ ಓರುಗಲ್ಲಪ್ಪ, ದಳವಾಯಿ ವೆಂಕಟೇಶ್ ಸಂತೋಷ್, ರೋಹಿತ್, ಶಾಂತಮೂರ್ತಿ, ಹರೀಶ್ ಸೇರಿದಂತೆ ಹಲವರಿದ್ದರು.

## ಜಾತಿ ಸಮೀಕ್ಷೆ ಮಾಹಿತಿ ಕೇಳಿದಾಗ ಕೊರಚ, ಕೊರಚಾರ್ ಎಂದು ಹೇಳಿ




» ಚಿತ್ರದುರ್ಗ

ತಮ್ಮ ಊರಿಗೆ ಹಾಗೂ ತಮ್ಮ ಮನೆಗಳಿಗೆ ಸಮೀಕ್ಷೆದಾರರು ಬಂದು ಯಾವ ಜಾತಿಗೆ ಸೇರಿದವರು ಎಂದು ಮಾಹಿತಿ ಕೇಳಿದಾಗ ಕೊರಚ, ಕೊರಚಾರ್ ಎಂದು ಹೇಳಿ ಬರೆಸುವಂತೆ ಅಖಿಲ ಕರ್ನಾಟಕ ಕೊರಚ ಮಹಾ ಸಂಘ (ರಿ)ದ ಪ್ರದಾನ ಕಾರ್ಯದರ್ಶಿ ವೈ.ಕುಮಾರ್ ಸಮುದಾಯದವರಲ್ಲಿ ಮನವಿ ಮಾಡಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳ ಮೀಸಲಾತಿ ಜಾರಿಗೆ ತರಲು 101 ಪರಿಶಿಷ್ಟ ಜಾತಿಗಳ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಜಾತಿಗಳ ಒಳ ಪಂಡಗಳನ್ನು ಗುರುತಿಸಿ ಜಾತಿಗಳ ಸಮೀಕ್ಷೆ ಮಾಡಿ ದತ್ತಾಂಶವುಳ್ಳ ವರದಿ ತಯಾರಿಸಲು ನ್ಯಾಯಮೂರ್ತಿ ನಾಗಮೋಹನ್‌ದಾಸ್ ಆಯೋಗವು ನಿರ್ಧರಿಸುತ್ತದೆ. ಈ ಸಂಬಂಧ ಜಾತಿ ಮತ್ತು ಉಪ ಜಾತಿಗಳನ್ನು ಗುರುತಿಸಲು ಒಳ ಮೀಸಲಾತಿ ನಿರ್ಧರಿಸಲು ಕ್ರಮಕೈಗೊಂಡಿದ್ದು, ತಮ್ಮ ಊರಿಗೆ ಹಾಗೂ ತಮ್ಮ ಮನೆಗಳಿಗೆ ಸಮೀಕ್ಷೆದಾರರು ಬರುತ್ತಾರೆ. ಅವರು ಮಾಹಿತಿ ಕೇಳಿದಾಗ ನೀವು ಯಾವ ಜಾತಿ ಎಂದು ಕೇಳಿದರೆ ನಾವುಗಳು ಎಸ್.ಸಿ.ಗಳು ಎಂದು ಹೇಳಬಾರದು. ಈಗಾಗಲೇ ಸರ್ಕಾರ ಜಾತಿಯನ್ನು ಎಸ್.ಸಿ. ಎಂದು ಪರಿಗಣಿಸಿರುತ್ತದೆ. ನೀವು ಯಾವ ಜಾತಿಗೆ ಸೇರಿದವರು ಎಂದು ಕೇಳಿದ ಪ್ರಶ್ನೆಗೆ ಕೊರಚ, ಕೊರಚಾರ್ ಎಂದು ಹೇಳಿ ಬರೆಸತಕ್ಕದ್ದು. ಈ ಹಿಂದೆ ಗೊತ್ತಿಲ್ಲದೆಯೋ ಅಥವಾ ಸರಿಯಾಗಿ ಅರ್ಥ ಮಾಡಿಕೊಳ್ಳದೆಯೋ ಹಾಗೂ ಮಾಹಿತಿ ಸರಿಯಾಗಿ ಇಲ್ಲದೆ ಕೊರಚ ಸಮುದಾಯದವರು ಕೊರಮ ಎಂದು ಬರೆಯಿಸಿದ್ದರೆ ಈಗ ಅವರು ಕೊರಚ ಎಂದು ಬರೆಯಿಸಿಕೊಳ್ಳತಕ್ಕದ್ದು. ಆದ್ದರಿಂದ ಸಮುದಾಯದ ನಿಜವಾದ ಲೆಕ್ಕಸಿಗದೆ ಸಮುದಾಯಕ್ಕೆ ಅನಾನುಕುಲವಾಗುತ್ತದೆ. ಹಾಗಾಗಿ ಈ ಬಾರಿ ತಮ್ಮ ಮೂಲ ಸಮುದಾಯವಾದ ಕೊರಚ ಮತ್ತು ಕೊರಚಾರ್ ಎಂದು ಬರೆಸಬೇಕು. ಈ ರೀತಿ ಬರೆಸಿದರೆ ಮುಂದೆ ನಮ್ಮ ಜಾತಿಯ ಜನ ಸಂಖ್ಯೆ ಹೆಚ್ಚಾಗಿ ಅದಕ್ಕೆ ಅನುಗುಣವಾಗಿ ಸರ್ಕಾರದಿಂದ ಹೆಚ್ಚಿನ ಸೌಲಭ್ಯವನ್ನು ಪಡೆದುಕೊಳ್ಳಲು ಅನುಕೂಲವಾಗುತ್ತದೆ ಎಂದಿದ್ದಾರೆ.

ಈ ಹಿನ್ನಲೆಯಲ್ಲಿ ತಾವುಗಳು ಯಾವುದೇ ಆಂತಕವಿಲ್ಲದೆ ನಮ್ಮ ಮೂಲ ಸಮುದಾಯವಾದ ಕೊರಚ ಮತ್ತು ಕೊರಚಾರ್ ಎಂದು ಬರೆಯಿಸಿಕೊಳ್ಳುವುದರಿಂದ ಹೆಚ್ಚು ಆನುಕೂಲವಾಗುತ್ತದೆ. ಅಲ್ಲದೆ, ನಿಮ್ಮ ಊರಿಗೆ ಸಮೀಕ್ಷೆದಾರರು ಬಂದಾಗ ಗ್ರಾಮದ ಮುಖಂಡರು ಅಥವಾ ಸಮುದಾಯದ ಮುಖಂಡರು ಜೊತೆಗೂಡಿ ಸಮೀಕ್ಷೆದಾರರಿಗೆ ಸಹಕರಿಸಿ ತಮ್ಮ ಜಾತಿಯ ಹೆಸರನ್ನು ಬರೆಸುವುದರಲ್ಲಿ ಹೆಚ್ಚಿನ ಆಸಕ್ತಿ ವಹಿಸುವಂತೆ ತಮ್ಮ ಸಮುದಾಯದವರಲ್ಲಿ ವೈ.ಕುಮಾರ್ ಮನವಿ ಮಾಡಿದ್ದಾರೆ.

ಈ ಪತ್ರಿಕಾಗೋಷ್ಠಿಯಲ್ಲಿ ಅಖಿಲ ಕರ್ನಾಟಕ ಕೊರಚ ಮಹಾಸಂಘ ಜಿಲ್ಲಾಧ್ಯಕ್ಷರು ತಿಮ್ಮಣ್ಣ ಪ್ರಧಾನ ಕಾರ್ಯದರ್ಶಿ ರಾಮು ಸದಸ್ಯರು ಮಂಜಪ್ಪ ಮಂಗಳಮ್ಮ ಜಯಮ್ಮ ಸುಂಕಮ್ಮ ಹಾಗೂ ಮತ್ತು ಇತರರು ಹಾಜರಿದ್ದರು

## ಟಿಬಿ ಗುಣಮುಖರಾದವರು ತಪ್ಪದೇ ಬಿಸಿಜಿ ಲಸಿಕೆ ಪಡೆಯಬೇಕು

» ಹರಿಹರ

ಕ್ಷಯ (ಟಿಬಿ) ಕಾಯಿಲೆ ಪೀಡಿತರು,ಗುಣಮುಖರಾದ ವರು ತಪ್ಪದೇ ಬಿಸಿಜಿ ಲಸಿಕೆ ಪಡೆಯಬೇಕು ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಅಬ್ದುಲ್ ಖಾದರ್ ಕಿವಿಮಾತು ಹೇಳಿದರು.ತಾಲೂಕಿನ ಹೊಳೆ ಸಿರಿಗೆರೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮಂಗಳವಾರ ವಯಸ್ಕರ ಬಿಸಿಜಿ ಲಸಿಕಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಈ ಹಿಂದೆ ಟಿಬಿ (ಕ್ಷಯ) ಕಾಯಿಲೆಯಿಂದ ಗುಣಮುಖರಾದವರು ಹಾಗೂ ಅವರ ನಿಕಟ ಸಂಪರ್ಕದಲ್ಲಿ ಇದ್ದವರು,60ವರ್ಷ ಮೇಲ್ಪಟ್ಟ ಹಿರಿಯ ನಾಗರೀಕ ರು, ಅಪೌಷ್ಠಿಕ ಆಹಾರ ಸೇವಿಸುವ ವ್ಯಕ್ತಿಗಳು, ಪ್ರಸ್ತುತ ಅಥವಾ ಹಿಂದೆ ಧೂಮಪಾನ ಮಾಡುವ ವ್ಯಕ್ತಿಗಳು ಹಾಗೂ ಮಧುಮೇಹ ಹೊರುವ ವ್ಯಕ್ತಿಗಳು ಒಪ್ಪಿಗೆ ನೀಡಿ ಲಸಿಗೆ ಹಾಕಿಸಿಕೊಳ್ಳಬೇಕು.ಕ್ಷಯಕ್ಕೆ ರಾಮಬಾಣ



ಈ ಬಿಸಿಜಿ ಲಸಿಕೆಯಾಗಿದ್ದು ಅದು ಬರದಂತೆ ತಡೆಗಟ್ಟುವ ಕೆಲಸ ಮಾಡುತ್ತದೆ ಆದ್ದರಿಂದ ಕ್ಷಯ ರೋಗದಿಂದ ಮುಕ್ತರಾಗಿರಿ ಎಂದು ತಿಳಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಚೇತನ್ ಮಾತನಾಡಿ, ಲಸಿಕೆ ಪಡೆದ ನಂತರ ಆ ಜಾಗದಲ್ಲಿ ನೋವು, ಊತ, ಚರ್ಮ ಕೆಂಪು ಬಣ್ಣಕ್ಕೆ ತಿರುಗುವ ಸಾಧ್ಯತೆ ಇದ್ದು, ಅದು ಕೆಲ ದಿನ ಗಳಲ್ಲಿ ಸ್ವಯಂ ಗುಣವಾಗುವುದು. ಈ ಬಗ್ಗೆ ಹೆದರುವ ಅಗತ್ಯವಿಲ್ಲ ಎಂದು ಧೈರ್ಯದ ಮಾತುಗಳನ್ನಾಡಿದರು.

ತಾಲೂಕು ಆರೋಗ್ಯ ಹಿರಿಯ ನಿರೀಕ್ಷಣಾಧಿಕಾರಿ ಎಂ.ಉಮ್ಮಣ್ಣ ಮಾತನಾಡಿ, ಮುಖ್ಯವಾಗಿ ಬಿಸಿಜಿ ಲಸಿಕೆಯನ್ನು ತೀವ್ರ ಅನಾ ರೋಗ್ಯ ಪೀಡಿತರು, ಗರ್ಭಿಣಿಯರು, ಹಾಲುಣಿಸುವ ತಾಯಂದಿರು, ಎಚ್‌ಐವಿ ಸೋಂಕಿತರು, ಕ್ಯಾನ್ಸರ್ ಪೀಡಿತರು, ಕಳೆದ ಮೂರು ತಿಂಗಳ ಹಿಂದೆ ಇತರರಿಂದ ರಕ್ತ ಪಡೆದವರು ಲಸಿಕೆಯನ್ನು ಮಾಡಿಸಿ ಕೊಳ್ಳಬಾರದು ಎಂದು ತಿಳಿಸಿದರು. ಈ ಸಮಯದಲ್ಲಿ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ನಾಗರಾಜ್,ಮಾಲಾಶ್ರೀ, ಕರಿಬಸಮ್ಮ, ಕಸ್ತೂರಿ ಬಾಯಿ, ಪುಷ್ಪವತಿ, ಶಶಿಕಲಾ ಹಾಗೂ ಲಸಿಕಾ ಫಲಾನುಭವಿಗಳು ಊರಿನ ಗ್ರಾಮಸ್ಥರು ಹಾಜರಿದ್ದರು.

## ಪ್ರಮುಖ ಸುದ್ದಿ

# ರಾಷ್ಟ್ರೀಯ ಸೇವಾಯೋಜನಾ ಶಿಬಿರಗಳ ಮೂಲಕ ಗ್ರಾಮದಲ್ಲಿ ಸ್ವಚ್ಚತೆಯ ಜಾಗೃತಿ: ತಿಪ್ಪೇಸ್ವಾಮಿ

» ಚಳ್ಳಕೆರೆ

ನಗರದ ಬಾಪೂಜಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾಯೋಜನಾ ಘಟಕ ಪ್ರಸ್ತುತ ವರ್ಷದ ಮೊದಲ ಶಿಬಿರವನ್ನು ತಾಲ್ಲೂಕಿನ ಬಾಲೇನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದು ರೈತ ಮುಖಂಡ ಒ.ಟಿ.ತಿಪ್ಪೇಸ್ವಾಮಿ ಶಿಬಿರವನ್ನು ಉದ್ಘಾಟಿಸಿದರು.

ಗ್ರಾಮೀಣ ಭಾಗದಲ್ಲಿ ಸ್ವಚ್ಚತೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಸಂತಸ ತಂದಿದೆ. ಗ್ರಾಮೀಣ ಭಾಗದ ಜನರಿಗೆ ಆರೋಗ್ಯದ ಬಗ್ಗೆ ಹೆಚ್ಚು ಗಮನ ಇರುವುದಿಲ್ಲ, ಕೆಲವೊಂದು ಸಂದರ್ಭದಲ್ಲಿ ಸ್ವಚ್ಚತೆ ಇಲ್ಲವಾದರೆ ರೋಗಗಳು ನಮ್ಮನ್ನು ವ್ಯಾಪಿಸುತ್ತವೆ ಈ ಹಿನ್ನೆಲೆಯಲ್ಲಿ ಕಾಲೇಜು ವಿದ್ಯಾರ್ಥಿಗಳು ಮನೆ, ಮನೆಗೂ ತೆರಳಿ ಸ್ವಚ್ಚತೆ ಬಗ್ಗೆ ಅರಿವು ಮೂಡಿಸಿದ್ದಾರೆ. ಗ್ರಾಮದ ಹಲವಾರು ರಸ್ತೆಗಳನ್ನು



ಸ್ವಚ್ಚಗೊಳಿಸುವ ಮೂಲಕ ಜನರ ಸಂತೋಷಕ್ಕೆ ಕಾರಣಕರ್ತರಾಗಿದ್ದಾರೆ. ಇಂತಹ ಶಿಬಿರಗಳು ಎಲ್ಲಾ ಗ್ರಾಮಗಳಲ್ಲೂ ನಡೆಯುವಂತಾಗಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಎನ್‌ಎಸ್‌ಎಸ್ ಅಧಿಕಾರಿ ಡಾ.ಜೆ. ತಿಪ್ಪೇಸ್ವಾಮಿ, ಕಾಲೇಜಿನಿಂದ ಪ್ರತಿವರ್ಷ ಹಮ್ಮಿಕೊಳ್ಳುವ ಶಿಬಿರಗಳು ಗ್ರಾಮೀಣ ಮಟ್ಟದಲ್ಲೇ ಏರ್ಪಡಿಸಲಾಗುತ್ತದೆ. ಗ್ರಾಮೀಣ ಭಾಗದಲ್ಲಿ ಎಲ್ಲರಿಂದಲೂ ಹೆಚ್ಚು ಸಹಕಾರ ಸಿಗುತ್ತದೆ. ಶಿಬಿರಗಳಿಂದ ಗ್ರಾಮದ ಸ್ವಚ್ಚತೆಯ ಜೊತೆಗೆ ಜನರ ವಿಶ್ವಾಸವನ್ನು ಗಳಿಸುವಲ್ಲಿ ನಾವು ಸಫಲರಾಗುತ್ತೇವೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಂಶುಪಾಲ ಡಾ.ಓ.ಬಾಬುಕುಮಾರ್, ಕಳೆದ ಹಲವಾರು ದಶಕಗಳಿಂದ ನಮ್ಮ ಕಾಲೇಜಿನಿಂದ ಶಿಬಿರ ಹಮ್ಮಿಕೊಂಡು ಗ್ರಾಮದ ಜನರಿಗೆ ಸ್ವಚ್ಚತೆಯ ಜೊತೆಗೆ ಇತರೆ ಚಟುವಟಿಕೆಗಳ ಬಗ್ಗೆಯೂ ಜಾಗೃತಿ ಮೂಡಿಸಲಾಗುತ್ತದೆ. ವಿದ್ಯಾರ್ಥಿಗಳು ಹಲವಾರು ಗ್ರಾಮೀಣ ಕಲೆಗಳನ್ನು ಪ್ರದರ್ಶಿಸಿ ಜನರಿಗೆ ಕಲೆಯ ಬಗ್ಗೆಯೂ ಮಾಹಿತಿ ನೀಡುತ್ತಾರೆ. ಜನರ ಸಹಕಾರದೊಂದಿಗೆ ಕಾಲೇಜಿನ ಬೋಧಕ ಮತ್ತು ಸಿಬ್ಬಂದಿ ವರ್ಗ ಶಿಬಿರವನ್ನು ಯಶಸ್ವಿಗೊಳಿಸುವ ನಿಟ್ಟಿನಿಂದ ನಮ್ಮೊಂದಿಗೆ ಕೈಜೋಡಿಸಿದ್ದಾರೆ. ಗ್ರಾಮದ ಜನರು ಶಿಬಿರದ ಚಟುವಟಿಕೆಗಳ ಬಗ್ಗೆ ಆಸಕ್ತಿಹೊಂದಿರುವುದು ಕಂಡುಬಂದಿದೆಎಂದರು.

ಗ್ರಾಪಂ ಸದಸ್ಯ ಒ.ಟಿ.ರಾಜೇಶ್, ಮುಖಂಡರಾದ ಪಿ.ಟಿ.ಪ್ರಶಾಂತ್‌ರೆಡ್ಡಿ, ಶಂಕರಮೂರ್ತಿ, ಆರ್.ಟಿ.ಭೀಮಣ್ಣ, ಆರ್. ಚಿದಾನಂದಪ್ಪ, ಒ.ಜಿ.ರವಿ, ಕೃಷ್ಣಾರೆಡ್ಡಿ, ಜಿ.ಕೆ.ಪ್ರವೀಣ್, ಪ್ರಾಧ್ಯಾಪಕರಾದ ಮುಜೀಬುಲ್ಲಾ, ಡಾ.ಡಿ.ಕರಿಯಣ್ಣ, ಡಾ.ಜಿ.ವಿ.ರಾಜಣ್ಣ, ಚಂದ್ರಶೇಖರ್, ಉಮೇಶ್, ನಂದಿನಿ ಮುಂತಾದವರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಕ್ಕೆ ಎಸ್.ಎಸ್.ಎಲ್ ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಶೇ.35ಕ್ಕಿಂತ ಅಧಿಕ ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ನಿಗಧಿತ ಅರ್ಜಿ ಮತ್ತು ಮಾಹಿತಿ ಪುಸ್ತಕವನ್ನು ಸರ್ಕಾರವು ನಿಗಧಿಪಡಿಸಿದ ಅರ್ಜಿ ಶುಲ್ಕವನ್ನು ಸಾಮಾನ್ಯ ವರ್ಗದವರಿಗೆ ರೂ.100/- ಮತ್ತು ಎಸ್‌ಸಿ, ಎಸ್‌ಟಿ, ಪ್ರವರ್ಗ-1 ಇವರಿಗೆ ರೂ.50/- ಸಮೀಪದ ದಾಖಲೆ ಪರಿಶೀಲನೆ ಕೇಂದ್ರದಲ್ಲಿ ಸಲ್ಲಿಸುವುದು. ಅರ್ಜಿ ಸಲ್ಲಿಸಲು ಮೇ.15 ಕೊನೆಯದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರ ಕಚೇರಿ, ಡಿ.ಆರ್.ಆರ್ ಸರ್ಕಾರಿ ಪಾಲಿಟೆಕ್ನಿಕ್, ದಾವಣಗೆರೆ ಸಂಪರ್ಕಿಸಲು ಕಾಲೇಜಿನ ಪ್ರಾಚಾರ್ಯರರು ತಿಳಿಸಿದ್ದಾರೆ.

### ಅಂಧ ಮಕ್ಕಳ ಶಾಲೆಗೆ ದಾಖಲಾತಿ ಪ್ರಾರಂಭ

» ದಾವಣಗೆರೆ

ಅಂಧಮಕ್ಕಳಸರ್ಕಾರಿಪಾಠಶಾಲೆ,ದಾವಣಗೆರೆಯಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿಗೆ 1ನೇ ತರಗತಿಯಿಂದ 10ನೇ ತರಗತಿವರೆಗೆ ಅಂಧ ಹೆಣ್ಣು ಮತ್ತು ಗಂಡು ಮಕ್ಕಳಿಗೆ ದಾಖಲಾತಿ ಪ್ರಾರಂಭವಾಗಿದೆ. ಈ ಶಾಲೆಯಲ್ಲಿ ಅಂಧ ಹೆಣ್ಣು ಮಕ್ಕಳಿಗೆ ಉಚಿತ ಶಿಕ್ಷಣದ ಜೊತೆಗೆ ವಸತಿಯುತ ಶಾಲೆಯಾಗಿರುತ್ತದೆ. ಸಾರ್ವಜನಿಕ ಶಿಕ್ಷಣ ಇಲಾಖೆಯವರು ನಿಗದಿಪಡಿಸಿರುವ ಸಾಮಾನ್ಯ ಮಕ್ಕಳಿಗೆ ನೀಡುತ್ತಿರುವ ಶಿಕ್ಷಣವನ್ನೇ ಇಲ್ಲಿಯೂ ಭೋದಿಸುವುದರ ಜೊತೆಗೆ ಬ್ರೈಲ್ ಲಿಪಿಯನ್ನು ಅಳವಡಿಸಿಲಾಗಿದೆ. ಬ್ರೈಲ್ ಪುಸ್ತಕಗಳು, ಶಾಲಾ ಸಮವಸ್ತ್ರ, ಕಲಿಕಾ ಉಪಕರಣಗಳು, ವೈದ್ಯಕೀಯ ತಪಾಸಣೆಯನ್ನು ಉಚಿತವಾಗಿ ನೀಡಲಾಗುತ್ತದೆ. ಶೈಕ್ಷಣಿಕ ಅವಧಿಯಲ್ಲಿ ಅಂಧ ಮಕ್ಕಳಿಗೆ ಪಠ್ಯೇತರ ಚಟುವಟಿಕೆಗಳಾದ ಯೋಗ ಮೆಡಿಟೇಷನ್. ದೈಹಿಕ ಶಿಕ್ಷಣ, ಸಂಗೀತ, ಡ್ಯಾನ್ಸ್ ಡ್ರಾಮ, ಚಲನ-ವಲನ ತರಬೇತಿ. ಕಂಪ್ಯೂಟರ್ ತರಬೇತಿ, ಒಳಾಂಗಣ ಹಾಗೂ ಹೊರಾಂಗಣ ಆಟಗಳು, ಕರಕುಶಲ ಕಾರ್ಯ ಚಟುವಟಿಕೆಗಳನ್ನು ಹೇಳಿಕೊಡಲಾಗುತ್ತದೆ. ಅಂಥ ಹೆಣ್ಣು ಮಕ್ಕಳ ವಸತಿನಿಲಯದಲ್ಲಿ ಸ್ನಾನಕ್ಕೆ ಬಿಸಿ ನೀರಿನ ವ್ಯವಸ್ಥೆ (ಸೋಲಾರ್ ವಾಟರ್ ಹೀಟರ್) ಮತ್ತು ಇತರೆ ಸೌಲಭ್ಯಗಳನ್ನು ಯಾವುದೇ ಶುಲ್ಕವಿಲ್ಲದೆ ಸರ್ಕಾರದ ವತಿಯಿಂದ ಸಂಪೂರ್ಣವಾಗಿ ಈ ಶಾಲೆಯಲ್ಲಿ ಒದಗಿಸಲಾಗುವುದು. ಸಾರ್ವಜನಿಕರು ತಮ್ಮ ವ್ಯಾಪ್ತಿಯಲ್ಲಿರುವ ದೃಷ್ಟಿ ವಿಕಲಚೇತನ ಮಕ್ಕಳು ಕಂಡು ಬಂದಲ್ಲಿ ಅವರ ಪೋಷಕರಿಗೆ ನಮ್ಮ ಶಾಲೆಯ ಬಗ್ಗೆ ಮಾಹಿತಿ ನೀಡಿ, ಶೇ. 40 ಕ್ಕಿಂತ ಹೆಚ್ಚಿನ ದೃಷ್ಟಿದೋಷ ಹೊಂದಿರುವ ಮಕ್ಕಳು ನಮ್ಮ ಸರ್ಕಾರಿ ಶಾಲೆಗೆ ದಾಖಲಾಗುವಂತೆ ಮಾಡಿ. ವಿಕಲಚೇತನ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಸಹಕರಿಸಬೇಕು. ಹೆಚ್ಚಿನ ಮಾಹಿತಿಗಾಗಿ ಅಂಧ ಮಕ್ಕಳ ಸರ್ಕಾರಿ ಪಾಠಶಾಲೆ, ದೇವರಾಜ ಅರಸ್ ಬಡಾವಣೆ ಬಿ ಬ್ಲಾಕ್, ಶಿವಾಲಿ ಟಾಕೀಸ್ ಹತ್ತಿರ ದಾವಣಗೆರೆ-577006 ಹಾಗೂ ಡಾ.ಕೆ.ಕೆ.ಪ್ರಕಾಶ್, ಶಾಲೆಯ ಅಧೀಕ್ಷಕರು, ಅವರ ದೂರವಾಣಿ ಸಂ: 9448415383, ಅಥವಾ ಕಛೇರಿ ಸಂಖ್ಯೆ: 08192-250442 ನ್ನು ಸಂಪರ್ಕಿಸಲು ಅಂಧ ಮಕ್ಕಳ ಸರ್ಕಾರಿ ಪಾಠಶಾಲೆಯ ಅಧೀಕ್ಷಕರು ತಿಳಿಸಿದ್ದಾರೆ.

### ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ

» ಚಿತ್ರದುರ್ಗ

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರಕ್ಕೆ ಗೌರವಧನ ಆಧಾರದ ಮೇಲೆ ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಮೇ 17 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಸಂದರ್ಶನದ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. 18-45 ವರ್ಷಗಳ ವಯೋಮಿತಿಯಲ್ಲಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಫಿಸಿಯೋಥೆರಪಿಸ್ಟ್/ಆಕ್ಯುಪೇಷನಲ್ ಥೆರಪಿಸ್ಟ್-1 ಹುದ್ದೆ ಖಾಲಿ ಇದ್ದು, ಡಿಗ್ರಿ ಇನ್ ಪಿಸಿಯೋಥೆರಪಿ/ಆಕ್ಯುಪೇಷನಲ್ ಥೆರಪಿ ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.25000/- ನೀಡಲಾಗುವುದು. ಪ್ರಾಥೋಟಿಸ್ಟ್ ಮತ್ತು ಆರ್ಥೋಟಿಸ್ಟ್ (ಪಿ&ಒ)-1 ಹುದ್ದೆ ಖಾಲಿ ಇದ್ದು, ಡಿಪ್ಲೊಮಾ ಇನ್ ಪಿ&ಓ/ಐಟಿಐ (ಫಿಟ್ಟರ್) ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.12000ಡ/-ವೇತನ ನೀಡಲಾಗುವುದು. ಸ್ಪೀಚ್ ಥೆರಪಿಸ್ಟ್ & ಆಡಿಯಾಲಿಜಿಸ್ಟ್-1 ಹುದ್ದೆ ಖಾಲಿ ಇದ್ದು, ಬಿ.ಎಸ್ಸಿ ಇನ್ ಸ್ಪೀಚ್ ಮತ್ತು ಆಡಿಯಾಲಜಿ ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.25000/-ವೇತನ ನೀಡಲಾಗುವುದು. ಮೊಬಿಲಿಟಿ ಇನ್‌ಸ್ಟ್ರಕ್ಟರ್-1 ಹುದ್ದೆ ಖಾಲಿ ಇದ್ದು, ಸರ್ಟಿಫಿಕೇಟ್ ಕೋರ್ಸ್ ಇನ್ ಓರಿಯಂಟೇಷನ್ & ಮೊಬಿಲಿಟಿ (ಓ&ಎಂ) ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.8000/- ವೇತನ ನೀಡಲಾಗುವುದು. ಇಯರ್ ಮೋಲ್ಡ್ ಟೆಕ್ನಿಷಿಯನ್-1 ಹುದ್ದೆ ಖಾಲಿ ಇದ್ದು, ಸರ್ಟಿಫಿಕೇಟ್ ಇನ್ ಇಯರ್ ಮೋಲ್ಡ್ ಟೆಕ್ನಾಲಜಿ ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.8000/- ವೇತನ ನೀಡಲಾಗುವುದು. ಅಗತ್ಯ ದಾಖಲೆಗಳೊಂದಿಗೆ ಕಾರ್ಯದರ್ಶಿಗಳು, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ , ಲೋಕಾಯುಕ್ತ ಕಚೇರಿ ಆವರಣ ಬಿ.ಡಿ.ರಸ್ತೆ ಚಿತ್ರದುರ್ಗ-577501, ದೂರವಾಣಿ ಸಂಖ್ಯೆ 08194-220085, ಮೊಬೈಲ್ 9448038400 ಹೆಸರಿನಲ್ಲಿ ಅರ್ಜಿಸಲ್ಲಿಸಬೇಕು.

---

ಕಾನೂನು ಅರಿವು-ನೆರವು ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್

# ಕಾರ್ಮಿಕರಿಗೆ ಕಾನೂನು ಅರಿವು ಅಗತ್ಯ

» ಚಿತ್ರದುರ್ಗ

ಕಾರ್ಮಿಕರಿಗೆ ಕಾನೂನು ಅರಿವು ಇದ್ದಾಗ ಮಾತ್ರ ತಮಗೆ ದೊರಕಬೇಕಾದ ಸೌಲಭ್ಯಗಳನ್ನು ಪಡೆದುಕೊಳ್ಳಲು ಸಾಧ್ಯ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಜಿಲ್ಲಾಸ್ಪತ್ರೆ ಆವರಣದ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯದ ಕಟ್ಟಡ ಕಾಮಗಾರಿ ಸಂಕೀರ್ಣದಲ್ಲಿ ಮಂಗಳವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಹಾಗೂ ಸ್ಟಾರ್ ಇನ್ಫ್ರಾಟೆಕ್ ಸಂಯುಕ್ತಾಶ್ರಯದಲ್ಲಿ "ಕಾರ್ಮಿಕ ದಿನಾಚರಣೆ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮ" ಉದ್ಘಾಟಿಸಿ ಅವರು ಮಾತನಾಡಿದರು.



ಕಾರ್ಮಿಕರ ಕಾಯ್ದೆಗೆ ಅನುಗುಣವಾಗಿ ಕಾರ್ಮಿಕರಿಗೆ ಸಿಗಬೇಕಾದ ಕನಿಷ್ಠ ವೇತನ ಹಾಗೂ ಸೌಲಭ್ಯಗಳನ್ನು ನೀಡಲು ಸಂಬಂಧಪಟ್ಟ ಏಜೆನ್ಸಿಯವರು ಹಾಗೂ ಕಾರ್ಮಿಕ ಇಲಾಖೆ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಹೇಳಿದರು.

ಕಾರ್ಮಿಕ ಇಲಾಖೆಯ ವಿವಿಧ ಸೌಲಭ್ಯಗಳನ್ನು ಪಡೆಯಲು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ನೊಂದಾಯಿಸಿಕೊಂಡು, ಕಾರ್ಮಿಕರ ಕಾರ್ಡ್ ಪಡೆದುಕೊಳ್ಳಬೇಕು. ನೋಂದಾಯಿತ ಫಲಾನುಭವಿಗಳಿಗೆ ಪಿಂಚಣಿ ಸೌಲಭ್ಯ, ವೈದ್ಯಕೀಯ ಸಹಾಯಧನ, ಅಪಘಾತ ಪರಿಹಾರ, ಪ್ರಮುಖ ವೈದ್ಯಕೀಯ ಸಹಾಯಧನ, ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಸಹಾಯಧನ, ಮಕ್ಕಳ ಮದುವೆಗೆ ಸಹಾಯಧನ ಸೇರಿದಂತೆ ಅನೇಕ ಸೌಲಭ್ಯಗಳು ದೊರೆಯಲಿದೆ ಎಂದು ಹೇಳಿದರು.

ಕೆಲಸದ ಸ್ಥಳದಲ್ಲಿ ಮಹಿಳಾ ಕಾರ್ಮಿಕರಿಗೆ ಪ್ರತ್ಯೇಕ ವಿಶ್ರಾಂತಿ ಕೊಠಡಿ, ಶೌಚಾಲಯ, ಸ್ನಾನದ ಗೃಹ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕು. ಕಾರ್ಮಿಕರಿಗೆ ಏನಾದರೂ ಸಮಸ್ಯೆಗಳು ಉದ್ಭವಿಸಿದರೆ ಕಾರ್ಮಿಕ ಅಧಿಕಾರಿಗಳಿಗೆ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಕ್ಕೆ ತಿಳಿಸುವ ಮೂಲಕ ಕಾನೂನು ನೆರವು ಪಡೆದುಕೊಳ್ಳುವಂತೆ ಸಲಹೆ ನೀಡಿದರು.

ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ ಮಾತನಾಡಿ, ಕಾರ್ಮಿಕರ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗಬೇಕು. ಒಪ್ಪತ್ತಿನ ಊಟಕ್ಕಾಗಿ ಬೇರೆ ಬೇರೆ ರಾಜ್ಯಗಳಿಂದ ಕೆಲಸ ಹರಿಸಿ ಬಂದಿದ್ದೀರಾ ಎಂದು ತಿಳಿಸಿದ ಅವರು, ನಿಮ್ಮ ಆರೋಗ್ಯದ ಕಡೆ ಹೆಚ್ಚಿನ ಗಮನಹರಿಸಬೇಕು ಎಂದು ಸಲಹೆ ನೀಡಿದರು.

ಅಸಂಘಟಿತ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯ ಸೌಲಭ್ಯಗಳ ಕೊರತೆ ಇದ್ದು, ಕಾರ್ಮಿಕರ ಕಾರ್ಡ್ ವಿತರಿಸಿ, ಸೌಲಭ್ಯ ದೊರೆಕಿಸಿಕೊಡುವಂತೆ ತಿಳಿಸಿದರು.

ಕಾರ್ಮಿಕ ಅಧಿಕಾರಿ ಅನಿಲ್ ಬಾಲಚಂದ್ರ ಬಗಟಿ ಮಾತನಾಡಿ, ಪಶ್ಚಿಮ ಬಂಗಾಳ, ಬಿಹಾರ್, ಆಂದ್ರಪ್ರದೇಶ ಸೇರಿದಂತೆ ವಿವಿಧ ರಾಜ್ಯದ ಸುಮಾರು 31 ಕಾರ್ಮಿಕರು ಇಲ್ಲಿ ಕಾರ್ಮಿಕರಾಗಿ ಕೆಲಸ ನಿರ್ವಹಿಸುತ್ತಿದ್ದು, ಈ ಎಲ್ಲ ಕಾರ್ಮಿಕರಿಗೆ ಕಾರ್ಮಿಕರ ಕಾರ್ಡ್ ವಿತರಿಸಲು ಅಗತ್ಯ ಕ್ರಮವಹಿಸಲಾಗಿದೆ. ಮುಂದಿನ ದಿನಗಳಲ್ಲಿ ಕಾರ್ಮಿಕರ ಕಾರ್ಡ್ ವಿತರಿಸಿ, ಮುನ್ನೆಚ್ಚರಿಕಾ ಆರೋಗ್ಯ ತಪಾಸಣೆ ಮೂಲಕ ಆರೋಗ್ಯ ತಪಾಸಣೆ ಪರೀಕ್ಷೆಗಳನ್ನು ನಡೆಸಲಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಚಿತ್ರದುರ್ಗ ಕಾರ್ಮಿಕ ನಿರೀಕ್ಷಕ ಪಿ.ಭೀಮೇಶ್, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಸ್ಟಾರ್ ಇನ್ಫ್ರಾಟೆಕ್ ಪ್ರಾಜೆಕ್ಟ್ ಮ್ಯಾನೇಜರ್ ಸುಧೀರ್ ಸೇರಿದಂತೆ ಕಾರ್ಮಿಕರು ಇದ್ದರು.

---

# ಮುರುಘಾಮಠದಲ್ಲಿ 19 ಜೋಡಿ ಸಾಮೂಹಿಕ ಕಲ್ಯಾಣ

» ಚಿತ್ರದುರ್ಗ



ಉಳ್ಳವರ ಮದುವೆಗಳು ಆಗುತ್ತವೆ. ಬಡವರೂ ಮದುವೆ ಮಾಡಿಕೊಳ್ಳುತ್ತಾರೆ. ಕೆಲವರದು ಅರಮನೆಯಲ್ಲಿ, ವಿಮಾನದಲ್ಲಿ ಮೊದಲಾಗಿ ಮದುವೆಯಾಗುತ್ತದೆ. ಆದರೆ ಸರಳ ಸಾಮೂಹಿಕ ವಿವಾಹವಾದರೆ ಅದು ಆದರ್ಶದ ಮದುವೆ ಅನಿಸಿಕೊಳ್ಳುತ್ತದೆ. ಇದನ್ನು ಪ್ರಪಂಚವೇ ಒಪ್ಪಿಕೊಳ್ಳುತ್ತದೆ ಎಂದು ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಆಡಳಿತ ಮಂಡಳಿ ಸದಸ್ಯರಾದ ಡಾ. ಬಸವಕುಮಾರ ಸ್ವಾಮಿಗಳು ಹೇಳಿದರು.

ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿಂದು ನಡೆದ 35ನೇ ವರ್ಷದ ಐದನೇ ತಿಂಗಳ ಸಾಮೂಹಿಕ ಕಲ್ಯಾಣ ಮಹೋತ್ಸವ ಕಾರ್ಯಕ್ರಮದ ದಿವ್ಯಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಶ್ರೀಮಂತರ ಮದುವೆಗಳಲ್ಲಿ ಪ್ರತಿಷ್ಠೆ ಎದ್ದುಕಾಣುತ್ತದೆ. ಇಂಥ ಕಾರ್ಯಕ್ರಮಗಳಲ್ಲಿ ಮದುವೆಗಳು ನಡೆದರೆ ಪೋಷಕರಿಗೆ ಸಾಲ ಮಾಡಲು ಅವಕಾಶವಿರುವುದಿಲ್ಲ. ಶ್ರೀಮಠವು ಯಾವುದೇ ಜಾತಿಗೆ ಸೀಮಿತವಾಗಿಲ್ಲ. ಶಾಂತವೀರ ಶ್ರೀಗಳ ಗದ್ದುಗೆ ಇರುವ ಜಾಗದಲ್ಲಿ ನೀವೆಲ್ಲ ವಿವಾಹವಾಗುತ್ತಿದ್ದೀರಿ. ಗುರುಗಳ ಆಶೀರ್ವಾದ ವಧು-ವರರ ಮೇಲೆ ಸದಾ ಇರುತ್ತದೆ ಎಂದರು.

ದಾವಣಗೆರೆ ವಿರಕ್ತಮಠದ ಡಾ. ಬಸವಪ್ರಭು ಸ್ವಾಮಿಗಳು ಮಾತನಾಡಿ, ಜೀವನ ಎಂದರೆ ಒಬ್ಬರಿಗೊಬ್ಬರು ಕುಸ್ತಿ ಹಿಡಿಯುವುದಲ್ಲ. ಗಂಡ ಹೆಂಡತಿ ವಿದ್ಯಾವಂತರಿರುತ್ತಾರೆ. ಪ್ರತಿಷ್ಠೆ ಅಹಂಕಾರದಿಂದ ಎಷ್ಟೋ ಸಂಸಾರ ಮುರಿದುಬೀಳುವ ಘಟನೆಗಳು ಕಣ್ಣೆದುರಿಗಿವೆ. ಸತಿ-ಪತಿ-ಕುಟುಂಬದ ಸದಸ್ಯರ ನಡುವೆ ಪ್ರೀತಿ ಇರಬೇಕು ಇಲ್ಲವಾದರೆ ಮನಸ್ತಾಪಗಳಿಂದ ವಿಚ್ಛೇದನಕ್ಕೆ ದಾರಿಯಾಗುತ್ತದೆ. ಅನೇಕ ವಿದ್ಯಾವಂತರ ಜೀವನ ಅಧೋಗತಿಗೆ ಹೋಗುತ್ತಿದೆ. ಇಬ್ಬರ ಮಧ್ಯೆ ಅನುಮಾನ ಅಪನಂಬಿಕೆ ಮೂಡಬಾರದು. ಅವಕ್ಕೆ ಔಷಧಿ ಇಲ್ಲ. ಹಾಗಾಗಿ ಸಂಸಾರ ಸುಸೂತ್ರವಾಗಿ ನಡೆಯಬೇಕಾದರೆ ಅಂಥವುಗಳಿಗೆ ಅವಕಾಶ ಮಾಡಿಕೊಡಬಾರದು. ನಮ್ಮದು ಬಸವತತ್ತ್ವ ಮಠ. ಬಸವತತ್ತ್ವದ ಆಧಾರದ ಮೇಲೆ ಇಲ್ಲಿ ವಿವಾಹಗಳು ನೆರವೇರುತ್ತಿವೆ ಎಂದು ನುಡಿದರು.



ನಿಪ್ಪಾಣಿಯ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಮಾತನಾಡಿ, ಬಸವಣ್ಣನವರು ಹೇಳಿದಂತೆ ಇವನಾರವ ಇವನಾರವ ಎಂದೆನಿಸದೆ ಎಲ್ಲರನ್ನು ತಮ್ಮವರಂತೆ ಕಾಣಬೇಕಿದೆ. ಯಾವುದೇ ಜಾತಿ ಮತ ಪಂಥ ಯಾವುದೇ ತಾರತಮ್ಯ ಇಲ್ಲದೆ ಅಂದು ಸಾಮೂಹಿಕ ವಿವಾಹ ಮಾಡುತ್ತಿದ್ದರು. ಅದೇ ಪರಂಪರೆಯನ್ನು ಶ್ರೀಮಠವು ಮುಂದುವರೆಸಿಕೊಂಡು ಬಂದಿದೆ. ನವ ವಧು-ವರರು ಪರಸ್ಪರ ಒಬ್ಬರನ್ನೊಬ್ಬರು ಅರ್ಥೈಸಿಕೊಂಡು ಅನ್ಯೋನ್ಯ ಜೀವನ ನಡೆಸಬೇಕು. ತಂದೆ-ತಾಯಿ, ಅತ್ತೆ-ಮಾವನ ಜತೆ ಹೊಂದಾಣಿಕೆ ಮನೋಭಾವ ಇರಬೇಕು. ಇಲ್ಲದೇ ಹೋದರೆ ಸಂಸಾರದ ಬದುಕು ಗಾಳಿಗೆ ಸಿಕ್ಕ ದೀಪದಂತಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ 19 ಜೋಡಿಗಳ ವಿವಾಹ ನೆರವೇರಿಸಲಾಯಿತು.ಜಮುರಾ ಕಲಾವಿದರಾದ ಉಮೇಶ್ ಪತ್ತಾರ್ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಚಿನ್ಮಯಾನಂದ ಸ್ವಾಗತಿಸಿದರು. ಟಿ.ಪಿ. ಜ್ಞಾನಮೂರ್ತಿ ನಿರೂಪಿಸಿದರು.

---

# ನನ್ನೊಂದಿಗೆ ಗಟ್ಟಿಯಾಗಿ ನಿಂತ ನಿಮ್ಮ ಅಭಿಮಾನಕ್ಕೆ ಎಂದೆಂದಿಗೂ ಚಿರಋಣಿ



» ದಾವಣಗೆರೆ

ಕಳೆದ ಒಂದೂವರೆ ವರ್ಷದಿಂದ ನನ್ನೊಟ್ಟಿಗೆ ಗಟ್ಟಿಯಾಗಿ ನಿಂತ ನಿಮ್ಮೆಲ್ಲರಿಗೂ ಎಂದೆಂದಿಗೂ ಚಿರಋಣಿಯಾಗಿರುತ್ತೇನೆ. ನೀವು ತೋರಿರುವ ಅಭಿಯಾನ ಎಂದೂ ಮರೆಯಲಾಗದು. ಮುಂದಿನ ದಿನಗಳಲ್ಲಿ ದೊಡ್ಡ ನಾಯಕನಾಗಿ ಬೆಳೆದರೆ ಅದೂ ನಿಮ್ಮಿಂದಲೇ. ರಾಜಕೀಯ ಪಯಣದಲ್ಲಿ ನನ್ನ ಜೊತೆ ನಿಲ್ಲಲು ನಿಮ್ಮಲ್ಲೂ ಗುಂಡಿಗೆ, ಧೈರ್ಯ, ಸ್ವಾಭಿಮಾನ ಬೇಕಿತ್ತು. ಅದು ನಿಮ್ಮಲ್ಲಿದೆ ಎಂದು ಇನ್‌ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಹಾಗೂ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ತಿಳಿಸಿದರು.ನಗರದ ಪೂಜಾ ಇಂಟರ್ ನ್ಯಾಷನಲ್ ಸಭಾಂಗಣದಲ್ಲಿ ಸ್ವಾಭಿಮಾನಿ ಅಭಿಮಾನಿ ಬಳಗ, ಹಿತೈಷಿಗಳು, ಅಭಿಮಾನಿಗಳು ಏರ್ಪಡಿಸಿದ್ದ ತನ್ನ 41ನೇ ಜನುಮ ದಿನಾಚರಣೆಯಲ್ಲಿ ಮಾತನಾಡಿದ ಅವರು, ನಿಮ್ಮೆಲ್ಲರನ್ನೂ ನೋಡಿ ತುಂಬಾನೇ ಖುಷಿಯಾಗಿದೆ. ಹುಡುಗ ಬೆಳೆಯಲಿ ಎಂಬ ಆಶಯ ನಿಮ್ಮೆಲ್ಲರೂ ಇದೆ. ಹಾಗಾಗಿ, ಬೀದರ್, ರಾಯಚೂರು, ಕೊಪ್ಪಳ, ವಿಜಯಪುರ, ಬೆಂಗಳೂರು ಸೇರಿದಂತೆ ರಾಜ್ಯದ ಮೂಲೆ ಮೂಲೆಗಳಿಂದ ಬಂದಿರುವ ಜನರನ್ನು ನೋಡಿದರೆ ಗೊತ್ತಾಗುತ್ತದೆ ಎಂದು ಹೇಳಿದರು. ರಾಜಕಾರಣದಲ್ಲಿ ಆರಂಭ ಇದು, ಅಂತ್ಯವಲ್ಲ ಎಂದು ದಾವಣಗೆರೆ ಲೋಕಸಭೆ ಚುನಾವಣೆಗೆ ಮುನ್ನ ಹೇಳಿದ್ದೆ. ಚುನಾವಣೆ ಆದ ಬಳಿಕ ನಾನು ಇಲ್ಲಿಂದ ಜಾಗ ಖಾಲಿ ಮಾಡುತ್ತೇನೆ ಎಂದುಕೊಂಡಿದ್ದರು. ನಾನೆಲ್ಲಿಗೂ ಹೋಗಿಲ್ಲ. ಇಲ್ಲಿಯೇ ಇದ್ದೇನೆ. ಬೀದರ್ ನಿಂದ ಚಾಮರಾಜನಗರದವರೆಗೆ ನನ್ನನ್ನು ಕಾರ್ಯಕ್ರಮಗಳಿಗೆ ಆಹ್ವಾನಿಸುತ್ತಿದ್ದಾರೆ. ನಾನು ಹೋಗುತ್ತಿದ್ದೇನೆ. ಶಿಕ್ಷಣದ ಮಹತ್ವ, ಧೈರ್ಯ, ಸ್ಫೂರ್ತಿದಾಯಕ ಮಾತು ಕೇಳಲು ತುದಿಗಾಲ ಮೇಲೆ ನಿಂತಿದ್ದಾರೆ. ನಾನು ಒಂದು ಜಾತಿಗೆ ಸೀಮಿತ ಅಲ್ಲ, ಸರ್ವಜನಾಂಗದವರು ಪ್ರೀತಿಯಿಂದ ಆಹ್ವಾನಿಸುತ್ತಾರೆ. ಯಾವುದೋ ಒಂದು ಜಾತಿ ಹಾಗೂ ವರ್ಗಕ್ಕೆ ಸೀಮಿತವಾಗಲು ಇಷ್ಟಪಡುವುದಿಲ್ಲ.

---

## ಪ್ರಮುಖ ಸುದ್ದಿ

# ಜ್ಯೋತಿಷಿ ರಾಘವೇಂದ್ರ ನಾಯಕಗೆ ಜ್ಯೋತಿಷ್ಯ ಚಕ್ರವರ್ತಿ ಬಿರುದು

» ಹೊಳಲ್ಕೆರೆ

ಪಟ್ಟಣದ ಐತಿಹಾಸಿಕ ಗಣಪತಿ ದೇವಸ್ಥಾನದ ಜ್ಯೋತಿಷಿ ರಾಘವೇಂದ್ರ ನಾಯಕ ಇವರಿಗೆ ಕರ್ನಾಟಕ ರಾಜ್ಯದ ದಶಾ ಅಕಾಡೆಮಿ ವತಿಯಿಂದ ಏಪ್ರಿಲ್-30 ರಂದು 'ಜ್ಯೋತಿಷ್ಯ ಚಕ್ರವರ್ತಿ' ಬಿರುದನ್ನು ನೀಡಿ ಸನ್ಮಾನಿಸಿದೆ.




ಜ್ಯೋತಿಷ್ಯ ಶಾಸ್ತ್ರದಲ್ಲಿ ಇವರ ಪಾಂಡಿತ್ಯವನ್ನು ಮತ್ತು ಸೇವೆಯನ್ನು ಗುರುತಿಸಿ ಈ ಬಿರುದನ್ನು ಪ್ರಧಾನ ಮಾಡಲಾಗಿದೆ. ಜ್ಯೋತಿಷಿ ರಾಘವೇಂದ್ರ ನಾಯಕ್ ರವರು ಜ್ಯೋತಿಷ್ಯ ಕ್ಷೇತ್ರದಲ್ಲಿ ಆಸಕ್ತಿವುಳ್ಳವರಾಗಿದ್ದು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ದಿಂದಲ್ಲಿ ಜ್ಯೋತಿಷ್ಯ ಶಾಸ್ತ್ರವನ್ನು ಶಾಸ್ತ್ರೋಕ್ತವಾಗಿ ಅಧ್ಯಯನ ಮಾಡಿದ್ದಾರೆ.

ಜ್ಯೋತಿಷ್ಯ ಶಾಸ್ತ್ರದಲ್ಲಿ ಕಷ್ಟಪಟ್ಟು ಕೃಷಿ ಮಾಡಿ ಹೊರ ತೆಗೆದ ಸಾರವನ್ನು ಜನ ಸಾಮಾನ್ಯರಿಗೆ ವೈಜ್ಞಾನಿಕವಾಗಿ ಮಾರ್ಗದರ್ಶನ ಮಾಡುತ್ತಿದ್ದಾರೆ, ವೈಜ್ಞಾನಿಕವಾಗಿ ಶಾಸ್ತ್ರಾಧಾರಿತ ವಿಚಾರಗಳಿಂದ ಆರೋಗ್ಯ ಪೂರ್ಣ ಸಮಾಜ ನಿರ್ಮಾಣ ಮಾಡಬೇಕೆಂಬ ಚಿಂತನೆ ಹೊಂದಿ ಜನರ ಮೌಢ್ಯತೆಯನ್ನು ಹೋಗಲಾಡಿಸಲು ಪ್ರಯತ್ನ ಮಾಡುತ್ತಿದ್ದಾರೆ.

ಪ್ರಾಚೀನಕಾಲದಲ್ಲಿಜ್ಯೋತಿಷ್ಯಶಾಸ್ತ್ರವನ್ನು ಮುಂದಿನ ಪೀಳಿಗೆಗೆ ಉಪಯೋಗವಾಗಲಿ ಎಂಬ ಸದುದ್ದೇಶದಿಂದ ಹಲವು ಋಷಿಗಳು ಈ ಶಾಸ್ತ್ರವನ್ನು ನೀಡಿದರು. ಅವರಲ್ಲಿ ಮುಖ್ಯವಾಗಿ ಪರಾಶರ ಋಷಿ ಪದ್ಧತಿ , ಜೈಮಿನಿ ಋಷಿ ಪದ್ಧತಿ, ಬೃಗು ಮಹರ್ಷಿ ನಾಡಿ ಪದ್ಧತಿ ಮುಖ್ಯವಾದವು, ರಾಘವೇಂದ್ರ ನಾಯಕ್ ರವರು ಈ ಎಲ್ಲಾ ಪದ್ಧತಿಗಳನ್ನು ಅಧ್ಯಯನ ಮಾಡಿ ಪಾಂಡಿತ್ಯ ಪಡೆದುಕೊಂಡು. ಹೀಗೆ ಬಹುಮುಖ ಪ್ರತಿಭೆಯುಳ್ಳ ಇವರು ಜನಸಾಮಾನ್ಯರಿಗೆ ಉತ್ತಮ ಮಾರ್ಗದರ್ಶಕರಾಗಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ.

ಇವರು ಕಲಿತಿರುವ ಜ್ಯೋತಿಷ್ಯ ಶಾಸ್ತ್ರವನ್ನು ಗ್ರಹಗಳು, ನಕ್ಷತ್ರಗಳು, ದೆಶೆ, ಅಷ್ಟಕವರ್ಗ, ಷಡ್ಬಲ, ಗ್ರಹಬಲ, ಸೂತ್ರಗಳ ಮೂಲಕ ಆಧ್ಯಾತ್ಮ, ಪುರಾಣ ಗಳನ್ನು ವೈಜ್ಞಾನಿಕ ರೀತಿಯಲ್ಲಿ ಸಾಮ್ಯಾನ್ಯರಿಗೂ ಅರ್ಥವಾಗುವ ರೀತಿಯಲ್ಲಿ ಶಾಸ್ತ್ರವನ್ನು ಅಳವಡಿಸಿಕೊಂಡಿದ್ದಾರೆ. ಇವರ ಪ್ರಕಾರ ಜ್ಯೋತಿಷ್ಯ ಎಂಬುದು ಜ್ಯೋತಿ ಎಂಬ ಪದದಿಂದ ಹುಟ್ಟಿದ್ದು, ಜ್ಯೋತಿ ಎಂದರೆ ಬೆಳಕು ,ಬೆಳಕು ಜ್ಞಾನದ ಸಂಕೇತ, ಜ್ಯೋತಿಷ್ಯವು ಬೆಳಕಿನ ರೀತಿ ನಮಗೆ ದಾರಿ ತೋರಿಸುತ್ತದೆ, ಅಂದರೆ ಜ್ಯೋತಿಷ್ಯವು ಮಾರ್ಗದರ್ಶನವೇ ಹೊರತು ಪರಿಹಾರವಲ್ಲ, ಆದರೆ ದುರದೃಷ್ಟವಶಾತ್ ಆಧುನಿಕತೆಯ ನಾಗಾಲೋಟದಲ್ಲಿ ಮನುಷ್ಯ ನಾನಾ ರೀತಿಯ ಸಮಸ್ಯೆಗಳಿಂದ ಬಳಲುತ್ತಿದ್ದು ಇಂತಹ ಸಂದರ್ಭದಲ್ಲಿ ಜ್ಯೋತಿಷ್ಯರು ಜನರ ಸಮಸ್ಯೆಗಳನ್ನೇ ಬಂಡವಾಳ ಮಾಡಿಕೊಂಡು ಹಣ ಮಾಡುವ ಕೀಳು ಮಟ್ಟಕ್ಕೆ ಇಳಿದು ಜ್ಯೋತಿಷ್ಯ ಶಾಸ್ತ್ರಕ್ಕೆ ಅಪಚಾರ ಮಾಡುತ್ತಿದ್ದಾರೆ. ಇಂತಂಹ ಹೊತ್ತಿನಲ್ಲಿ ಶುದ್ಧ ಪಾರದರ್ಶಕ ಅಧುನಿಕ ಶೈಲಿಯಲ್ಲಿ ಜ್ಯೋತಿಷ್ಯ ಹೇಳುವ ಅಪರೂಪದ ವ್ಯಕ್ತಿತ್ವದಲ್ಲಿ ರಾಘವೇಂದ್ರ ಶಾಸ್ತ್ರಿಯೂ ಒಬ್ಬರು.

> ಜನರ ಭಾವನೆಗಳನ್ನು ದುರುಪಯೋಗ ಮಾಡಿಕೊಂಡು ಪರಿಹಾರದ ಹೆಸರಿನಲ್ಲಿ ಮೋಸ ಮಾಡುತ್ತಿರುವ ಕಪಟಿ ಜ್ಯೋತಿಷಿಗಳ ಬಗ್ಗೆ ಎಚ್ಚರದಿಂದ ಇರಬೇಕು. ಕರ್ಮ ಸಿದ್ಧಾಂತದ ಪ್ರಕಾರ ನಮ್ಮ ನಮ್ಮ ಭವಿಷ್ಯ ಈಗಾಗಲೇ ನಿರ್ಧಾರವಾಗಿದ್ದು, ಅದನ್ನು ಪರಿಹಾರ ಎಂಬ ತಂತ್ರದ ಮೂಲಕ ಬದಲಾಯಿಸಲು ಸಾಧ್ಯವಿಲ್ಲ, ಆದರೆ ಜ್ಯೋತಿಷಿಗಳು ತಮ್ಮ ಜ್ಞಾನದಿಂದ ಜನರಿಗೆ ಒಳ್ಳೆಯ ಸಮಯ ಯಾವುದು, ಕೆಟ್ಟ ಸಮಯ ಯಾವುದು, ಯಾವ ಸಮಯದಲ್ಲಿ ಹೇಗೆ ಯಾವ ನಿರ್ಧಾರ ಕೈಗೊಳ್ಳಬೇಕು, ಎಂಬ ವಿಚಾರಗಳಿಗೆ ಜ್ಯೋತಿಷ್ಯರು ಮಾರ್ಗದರ್ಶನ ಮಾಡಬಹುದೇ ಹೊರತು ಅವರ ಹಣೆಬರಹ ಬದಲಾಯಿಸಿಲು ಯಾರಿಂದಲೂ ಸಾಧ್ಯವಿಲ್ಲ, ಪರಿಹಾರಗಳಿಂದ ಜನರ ಸಮಸ್ಯೆ ಪರಿಹರಿಸಲು ಸಾಧ್ಯವಿಲ್ಲ. ಆದರೆ ಈ ಪರಿಹಾರಗಳು ಬೆಟ್ಟವನ್ನು ಚಿಕ್ಕದು ಮಾಡುವುದಿಲ್ಲ. ಆದರೆ ಆ ಬೆಟ್ಟವನ್ನು ಹತ್ತುವಂತ ಶಕ್ತಿ ನೀಡುತ್ತವೆ ಎಂಬ ಭಾವನೆಯನ್ನು ಇಲ್ಲಿ ಸೃಷ್ಟಿಸಿ ಆತ್ಮ ಶಕ್ತಿಯನ್ನು ನೀಡಲು ಸಾಧ್ಯ.
>
> » **ಜ್ಯೋತಿಷಿ ರಾಘವೇಂದ್ರ ಹೊಳಲ್ಕೆರೆ.**

> ಸನಾತನ ಕಾಲದಿಂದ ವೇದಗಳು, ಪೂರಾಣಗಳು, ಸಂಪ್ರಾದಾಯ, ಶಾಸ್ತ್ರಗಳಲ್ಲಿ ಜನರ ನಂಭಿಕೆ ಇಟ್ಟುಕೊಂಡಿದ್ದಾರೆ. ಅವುಗಳಿಂದ ನಮ್ಮ ಬದುಕು ಹಸನವಾಗುವ ಕಲ್ಪನೆ ಇಟ್ಟುಕೊಂಡಿದ್ದಾರೆ. ಹಾಗಾಗಿ ಜ್ಯೋಷಿಗಳ ಹತ್ತಿರ ಜನರು ಹೋಗುತ್ತಾರೆ. ಅದರಿಂದ ಪರಿಹಾರ ಕಂಡುಕೊಳ್ಳುವ ಭರವಸೆ ಸಿಕ್ಕಬಹುದು ಎನ್ನುವ ನಂಬಿಕೆ ಜನರಲ್ಲಿದೆ. ಇಂತಂಹ ಹೊತ್ತಿನ ವೈಜ್ಞಾನಿಕ ಮಾದರಿಯಲ್ಲಿ ಜ್ಯೋತಿಷ್ಯ ಹೇಳುವ ರಾಘವೇಂದ್ರ ಇವರಿಗೆ ಜ್ಯೋತಿಷ್ಯ ಚಕ್ರವರ್ತಿ ಬೀರುದು ಸಿಕ್ಕುವುದು ನಿಜ್ಜಕ್ಕು ಸಂತಸ ತಂದಿದೆ.
>
> » **ಹೆಚ್.ಆರ್.ನಾಗರತ್ನ ವೇದಮೂರ್ತಿ ಉಪಾಧ್ಯಕ್ಷರು. ಪುರಸಭೆ ಹೊಳಲ್ಕೆರೆ**



# ಕಾಣೆಯಾಗುವ ಬಾಲ್ಯದ ಆದರ್ಶಗಳು......

ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಣ ಗುಣಮಟ್ಟದ ಪರೀಕ್ಷೆ ಮಾಡುವ ತನಿಖಾಧಿಕಾರಿಗಳು ವಿದ್ಯಾರ್ಥಿಗಳನ್ನು ಪ್ರಶ್ನೆ ಮಾಡುತ್ತಾರೆ........

ನೀವು ದೊಡ್ಡವರಾದ ಮೇಲೆ ಏನಾಗಲು ಇಷ್ಟ ಪಡುತ್ತೀರ ?

**ಒಬ್ಬ**

" ನಾನು ಪೋಲೀಸ್ ಅಧಿಕಾರಿಯಾಗಿ ಕಳ್ಳರನ್ನು ಹಿಡಿದು ಜನರಿಗೆ ಭದ್ರತೆ ನೀಡುತ್ತೇನೆ."

**ಇನ್ನೊಬ್ಬ**

" ನಾನು ಐಎಎಸ್ ಪಾಸು ಮಾಡಿ ಬಡವರಿಗೆ ನನ್ನ ಕೈಲಾದ ಸಹಾಯ ಮಾಡುತ್ತೇನೆ. "

**ಮತ್ತೊಬ್ಬ**

" ನಾನು ಡಾಕ್ಟರ್ ಆಗಿ ಹಣವಿಲ್ಲದ ಬಡ ರೋಗಿಗಳಿಗೆ ಚಿಕಿತ್ಸೆ ನೀಡುತ್ತೇನೆ."

**ಮಗದೊಬ್ಬ**

" ನಾನು ಸೈನ್ಯ ಸೇರಿ ದೇಶ ರಕ್ಷಣೆ ಮಾಡುತ್ತೇನೆ "

**ಅವನೊಬ್ಬ**

" ನಾನು ಪತ್ರಕರ್ತನಾಗಿ ಸಮಾಜದ ಹುಳುಕುಗಳನ್ನು ತೋರಿಸಿ ಪ್ರಜಾಪ್ರಭುತ್ವದ ಕಾವಲುಗಾರನಾಗುತ್ತೇನೆ. "

**ಇವನೊಬ್ಬ**

" ನಾನು ಕೃಷಿ ವಿಜ್ಞಾನಿಯಾಗಿ ರೈತರ ಸಂಕಷ್ಟಗಳಿಗೆ ಪರಿಹಾರ ಕಂಡುಹಿಡಿಯುತ್ತೇನೆ "

**ಅಲ್ಲೊಬ್ಬ**

" ನಾನು ಸಮಾಜ ಸೇವಕನಾಗಿ ನಿಸ್ವಾರ್ಥದಿಂದ ಜನರ ಸೇವೆ ಮಾಡುತ್ತೇನೆ."

**ಇಲ್ಲೊಬ್ಬ**


" ನಾನು ರಾಜಕಾರಣಿಯಾಗಿ ಪ್ರಾಮಾಣಿಕತೆಯಿಂದ ಜನರ ಕಷ್ಟಗಳಿಗೆ ಸ್ಪಂದಿಸುತ್ತೇನೆ. "

**ಯಾರೋ ಒಬ್ಬ**

" ನಾನು ಇಂಜಿನಿಯರ್ ಆಗಿ ಅತ್ಯುತ್ತಮ ಗುಣಮಟ್ಟದ ರಸ್ತೆ ಸೇತುವೆ ನಿರ್ಮಿಸುತ್ತೇನೆ ."

ಕೆಲವರು ಕ್ರೀಡೆ ಸಂಗೀತ ಶಿಕ್ಷಣ ಸಾಹಿತ್ಯ ವ್ಯಾಪಾರ ಉದ್ಯಮ ವಿಜ್ಞಾನ ಹೀಗೆ ನಾನಾ ಕ್ಷೇತ್ರಗಳಲ್ಲಿ ಸಾಧನೆ ಮಾಡುವ ಕನಸು ಕಾಣುತ್ತಾರೆ......

ಅದೃಷ್ಟವಶಾತ್ ಅವರಲ್ಲಿ ಕೆಲವರು ತಾವು ಅಂದು ಆಸೆ ಪಟ್ಟ ಗುರಿ ತಲುಪುತ್ತಾರೆ.......









**ಆದರೆ,**

ಅವರು ಗುರಿ ತಲುಪಿದ ನಂತರ ತಾವು ಶಾಲೆಯಲ್ಲಿದ್ದಾಗ ಮುಗ್ದತೆಯಿಂದ ಕನಸು ಕಂಡ ಆ " ಸೇವೆಯನ್ನು " ನಿಜವಾಗಿಯೂ ಕಾರ್ಯರೂಪಕ್ಕೆ ತರುವರೇ ?

**ಆ ವ್ಯವಸ್ಥೆ ನಮ್ಮಲ್ಲಿ ಇದೆಯೇ ?**

ನನಗೆ ತಿಳಿದಿರುವಂತೆ ಶೇಕಡಾ 10% ಜನ ಆ ಬಾಲ್ಯದ ನೆನಪುಗಳನ್ನು ಹಾಗೇ ಉಳಿಸಿಕೊಂಡು ಸಂಪೂರ್ಣ ಅಲ್ಲದಿದ್ದರೂ ಸಾಧ್ಯವಾದ ಮಟ್ಟಿಗೆ ಜೀವನ ಪೂರ್ತಿ ಅದನ್ನು ಕಾರ್ಯಗತಗೊಳಿಸಲು ಪ್ರಯತ್ನಿಸುತ್ತಾರೆ.

ಉಳಿದವರು.......

**ದೆಲವರು,**

ಪ್ರಾರಂಭದಲ್ಲಿ ಸ್ವಲ್ಪ ಪ್ರಯತ್ನಿಸಿ ನಂತರ ವ್ಯವಸ್ಥೆಯೊಳಗೆ ಒಬ್ಬರಾಗುತ್ತಾರೆ.

**ಇನ್ನೊಬ್ಬರು,**

ಕೌಟುಂಬಿಕ – ಸಾಂಸಾರಿಕ ಬಂಧನದಲ್ಲಿ ಸಿಲುಕಿ ಹಳೆಯದನ್ನು ಮರೆಯುತ್ತಾರೆ.

**ಮತ್ತೊಬ್ಬರು,**

ಹಣ ಅಧಿಕಾರದ ದುರಾಸೆಗೆ ಬಿದ್ದು ಗತಕಾಲದ ದಿನಗಳನ್ನು ಮರೆತು ಭ್ರಷ್ಟರಾಗುತ್ತಾರೆ.

**ಹಲವರು,**

ರಾಜಕೀಯ – ವಾಣಿಜ್ಯೋದ್ಯಮಿಗಳ ಒತ್ತಡಕ್ಕೆ ಮಣಿದು ಈ ಕೆಟ್ಟ ವ್ಯವಸ್ಥೆಯೊಳಗೆ ಸೇರಿ ಹೋಗುತ್ತಾರೆ.

**ಇನ್ನೊಂದಿಷ್ಟು,**

ತೋರಿಕೆಗೆ ಒಳ್ಳೆಯವರಂತೆ ನಟಿಸುತ್ತಾ ಒಳಗೊಳಗೆ ಅಪಾರ ಭ್ರಷ್ಟರಾಗಿರುತ್ತಾರೆ.

**ಮತ್ತೊಂದಿಷ್ಟು,**

ಸ್ವಲ್ಪ ಆ ಕಡೆ ಸ್ವಲ್ಪ ಈ ಕಡೆ ತೊಳಲಾಡುತ್ತಾ ಎರಡನ್ನೂ ಮಾಡಲು ಧೈರ್ಯ ಸಾಲದೆ ಒಳಗೊಳಗೆ ಅಸಹಾಯಕತೆಯಿಂದ ನರಳುತ್ತಾ ಸಾಗುತ್ತಿರುತ್ತಾರೆ.

ಹೀಗೆ ಬಾಲ್ಯದ ಕನಸುಗಳು ಕಮರಿ ಹೋಗುತ್ತಾ ಇಡೀ ವ್ಯವಸ್ಥೆ ವಿನಾಶದ ಅಂಚಿಗೆ ನೂಕಲ್ಪಡುತ್ತಿದೆ.

ನಮ್ಮ ಸೋಷಿಯಲ್ ಸ್ಟ್ರಕ್ಚರ್ ನ ಒಳ್ಳೆಯ ಅಡಿಪಾಯ ವೇದಿಕೆಯ ಮಟ್ಟಕ್ಕೆ ಬರುವ ಹೊತ್ತಿಗೆ ಶಿಥಿಲವಾಗಿರುತ್ತದೆ. ಆ ಶಿಥಿಲ ವೇದಿಕೆಯ ಮೇಲೆ Perform ಮಾಡುವ ಹೊತ್ತಿಗೆ ವ್ಯಕ್ತಿ ಆಸಕ್ತಿಯನ್ನೇ ಕಳೆದುಕೊಂಡು ನಿಸ್ತೇಜಿತನಾಗಿರುತ್ತಾನೆ.

ವೀಕ್ಷಕರು ಪ್ರಾರಂಭದಲ್ಲಿ ಅಪಾರ ನಿರೀಕ್ಷೆ ಇಟ್ಟುಕೊಂಡಿರುತ್ತಾರೆ. ನಂತರ ಕ್ರಮೇಣ ಎಲ್ಲರ ಸಾಮರ್ಥ್ಯವೂ ತೃಪ್ತಿ ತರದೇ ಇದ್ದಾಗ ನಿರಾಸೆಯಿಂದ ವ್ಯವಸ್ಥೆಗೆ ಹೊಂದಿಕೊಳ್ಳತೊಡಗುತ್ತಾರೆ.

ಯಾರಾದರೂ ಅಷ್ಟೆ ಎಂದು ನಿರಾಸಕ್ತರಾಗುತ್ತಾರೆ.

ಬಹುತೇಕ ಭಾರತೀಯ ಸಮಾಜದ ಇಂದಿನ ಸ್ಥಿತಿ ಹೀಗೇ ಆಗಿದೆ.

ಬದಲಾವಣೆ ಅಡಿಪಾಯದಿಂದಲೇ ಪ್ರಾರಂಭವಾಗಬೇಕಿದೆ ಮತ್ತು ಕೊನೆಯವರೆಗೂ ಅದೇ ಗುಣಮಟ್ಟ ಕಾಪಾಡಬೇಕಿದೆ.

ಅದನ್ನು ನಾವೆಲ್ಲರೂ ಅತ್ಯಂತ ಜವಾಬ್ದಾರಿಯಿಂದ ನಿರ್ವಹಿಸುವ ದಿನಗಳು ಶೀಘ್ರವಾಗಿ ಬರಲಿ ಎಂದು ಆಶಿಸುತ್ತಾ.....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ನಾಡು ಜಲಕ್ಕೋಸ್ಕರ ಹೋರಾಡುವುದು ನಮ್ಮ ಧ್ಯೇಯ

» **ಚಿತ್ರದುರ್ಗ**

ಕನ್ನಡ ನಾಡು, ನುಡಿ, ಜಲಕ್ಕೋಸ್ಕರ ಹೋರಾಡುವುದು ನಮ್ಮ ಧ್ಯೇಯವಾಗಿದೆ ಎಂದು ನವ ಕ್ರಾಂತಿ ರಕ್ಷಣೆ ವೇದಿಕೆಯ ರಾಜ್ಯ ಅಧ್ಯಕ್ಷರಾದ ಪ್ರದೀಪ್ ಕುಮಾರ್ ಹೇಳಿದರು



ನಗರದ ಪ್ರವಾಸಿ ಮಂದಿರದಲ್ಲಿ ನವ ಕ್ರಾಂತಿ ರಕ್ಷಣೆ ವೇದಿಕೆಯ ಚಿತ್ರದುರ್ಗ ಜಿಲ್ಲಾ ಘಟಕದ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಮಾಜದಲ್ಲಿ ಜಾತಿ ಬೇಧವಿಲ್ಲದೆ ಸಮಾನತೆಗೋಸ್ಕರ ಹಾಗೂ ಶಿಕ್ಷಣ ಅಭಿವೃದ್ಧಿಗಾಗಿ ಹೋರಾಡಿ ಯಾವುದೇ ರಾಜಕೀಯ ಪಕ್ಷಕ್ಕೆ ಸೀಮಿತವಾಗಿರದಂತೆ ನೋಡಿಕೊಳ್ಳುವುದು ಪಕ್ಷ ಭೇದ ಮರೆತು ಕನ್ನಡ ನಾಡು, ನುಡಿ, ಜಲಕ್ಕೋಸ್ಕರ ಹೋರಾಡಿ ಎಂದು ಜಿಲ್ಲಾ ಸಂಘಟನೆಗೆ ಕರೆಕೊಟ್ಟರು.

ಈ ಸಂದರ್ಭದಲ್ಲಿ ಚಿತ್ರದುರ್ಗ ಜಿಲ್ಲಾ ಅಧ್ಯಕ್ಷರಾಗಿ ಮೋಹನ್ ಸಿ.ಆರ್. ರವರನ್ನು ಆಯ್ಕೆ ಮಾಡಲಾಯಿತು ಜೊತೆಗೆ ಶ್ರೀನಿವಾಸ ಯಾದವ್ ಬಸವರಾಜ್, ಆಕಾಶ್,ವಿನಯ್ ಕುಮಾರ್ ಆರ್, ನವೀನ್ ಕುಮಾರ್, ಜಗದೀಶ್ ಕೆ, ಸಿದ್ದೇಶ್ ಕೆ ಧನಂಜಯ್ ಕುಮಾರ್ ಕೆ, ಗೋಪಿ ,ವೀರೇಶ, ರವೀಂದ್ರನಾಥ್ ಧರ್ಮರಾಜ್, ಸಂಕಣ್ಣ, ರವರನ್ನು ಚಿತ್ರದುರ್ಗ ಜಿಲ್ಲಾ ಘಟಕದ ಪದಾಧಿಕಾರಿಗಳನ್ನಾಗಿ ಜಿಲ್ಲಾ ಘಟಕಕ್ಕೆ ಆಯ್ಕೆ ಮಾಡಲಾಯಿತು.

ಈ ಸಭೆಯಲ್ಲಿ ನವ ಕ್ರಾಂತಿ ರಕ್ಷಣೆ ವೇದಿಕೆಯಉಪಾಧ್ಯಕ್ಷರುಬಾಗೋಡಿ ಸ್ವಾಮಿ, ಹನುಮಂತರಾಯ ಪ್ರಧಾನ ಕಾರ್ಯದರ್ಶಿ ವಿರೂಪಾಕ್ಷಪ್ಪ ಜಿಲ್ಲಾ ಗೌರವ ಅಧ್ಯಕ್ಷಮಲ್ಲೇಗೌಡ್ರು ಉಪಸ್ಥಿತರಿದ್ದರು.

## 24 ವರ್ಷ ದೇಶಸೇವೆ ಮಾಡಿದ ವೀರಯೋಧನಿಗೆ ಸನ್ಮಾನ



ಹಿರಿಯೂರು: ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕಿನ ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಗುಳಗೊಂಡನಹಳ್ಳಿ ಗ್ರಾಮ ಶಾಖೆ ವತಿಯಿಂದ 24 ವರ್ಷಗಳ ಕಾಲ ಸುದೀರ್ಘ ಸೇವೆಯನ್ನು ಸಲ್ಲಿಸಿದ ಹರ್ತಿಕೋಟೆ ಗ್ರಾಮದ ಹೆಮ್ಮೆಯ ಪುತ್ರ, ವೀರಯೋಧ, ಸುರೇಶರವರ ದೇಶಸೇವೆಗೆ, ಅಂಬೇಡ್ಕರ್ ಸ್ವಾಭಿಮಾನಿ ಸೇನೆ, ಗುಳಗೊಂಡನಹಳ್ಳಿ ಗ್ರಾಮ ಶಾಖೆಯಿಂದ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಶಾಖೆ ಗೌರವ ಅಧ್ಯಕ್ಷರು ಶಂಕರಪ್ಪ,ಹಾಗೂ ಪದಾಧಿಕಾರಿಗಳಾದ, ಕೆಂಚಪ್ಪ, ತಿಪ್ಪೇಸ್ವಾಮಿ, ಮಂಜುನಾಥ್, ಹಾಲಪ್ಪ, ರಂಗ, ಪ್ರದೀಪ್, ರವಿ, ಮಾರುತಿ, ದೀಲಿಪ್, ಶಿವಕೋಟಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T